
ವಿಷ್ಣು ಸಹಸ್ರನಾಮಸ್ತೋತ್ರಮ್

# ವಿಷ್ಣು ಸಹಸ್ರನಾಮಸ್ತೋತ್ರಮ್ ಅರ್ಥ ಪೂರ್ಣವಾಗಿ

# ಶ್ರೀ ಗುರುಭ್ಯೋ ನಮಃ | ಹರಿಃ ಓಂ |

## ಪೀಠಿಕೆ

ಮಹಾಭಾರತ ಯುದ್ಧ ಮುಗಿದಿದೆ. ಭೀಷ್ಮಾಚಾರ್ಯರು ಶರಶಯ್ಯದಲ್ಲಿದ್ದಾರೆ. ಇತ್ತ ಧರ್ಮರಾಯನ ಪಟ್ಟಾಭಿಷೇಕ ಶ್ರೀಕೃಷ್ಣ ಮತ್ತು ವ್ಯಾಸರ ಸಮ್ಮುಖದಲ್ಲಿ ನಡೆದಿದೆ. ಒತ್ತಾಯದಲ್ಲಿ ಪಟ್ಟಾಭಿಷೇಕಕ್ಕೆ ಒಪ್ಪಿದ್ದ ಯುಧಿಷ್ಠಿರನ ಮನಸ್ಸಿಗೆ `ಕಿಂಚಿತ್ತೂ ಸಮಾಧಾನವಿಲ್ಲ. ಎಲ್ಲಾ ವೀರರು, ಹಿರಿಯರು, ಲಕ್ಷ-ಲಕ್ಷ ಮಂದಿ ಸೈನಿಕರ ನಾಶದ ನಂತರ, ಸಿಂಹಾಸನವೇರಿದ ಆತನಿಗೆ ಪಾಪ ಪ್ರಜ್ಞೆ ಕಾಡುತ್ತಿರುತ್ತದೆ. ಇಂತಹ ಸ್ಥಿತಿಯಲ್ಲಿದ್ದ ಧರ್ಮರಾಯನನ್ನು ಶ್ರೀಕೃಷ್ಣ ಭೀಷ್ಮಾಚಾರ್ಯರ ಬಳಿಗೆ ಕರೆತಂದು, ಆತನಿಗೆ ಧರ್ಮ ಪಾಠವನ್ನು ಬೋಧಿಸುವಂತೆ ಕೇಳಿಕೊಳ್ಳುತ್ತಾನೆ. ಧರ್ಮದ ಪರ ಹೋರಾಡಿ ಗೆದ್ದ ಧರ್ಮರಾಯನನ್ನು ಕೊಂಡಾಡಿದ ಭೀಷ್ಮಾಚಾರ್ಯರು, "ಒಂದು ವೇಳೆ ನೀನು ಅನ್ಯಾಯದ ವಿರುದ್ಧದ ಈ ಯುದ್ಧದಲ್ಲಿ ಹೋರಾಡದೆ ಇದ್ದಿದ್ದರೆ, ನಿನ್ನನ್ನು ಹೇಡಿ ಎನ್ನುತ್ತಿದ್ದೆ" ಎನ್ನುತ್ತಾರೆ. ಈ ಮಾತಿನಿಂದ ಧರ್ಮರಾಯನಲ್ಲಿದ್ದ ಪಾಪ ಪ್ರಜ್ಞೆ ಹೊರಟುಹೋಗಿ , ತನಗೆ ಧರ್ಮೋಪದೇಶ ಮಾಡಬೇಕೆಂದು ಭೀಷ್ಮಾಚಾರ್ಯರಲ್ಲಿ ಕೇಳಿಕೊಳ್ಳುತ್ತಾನೆ. ಈ ರೀತಿ ಭೀಷ್ಮಾಚಾರ್ಯರು ಧರ್ಮರಾಯನಿಗೆ ಧರ್ಮೋಪದೇಶ ಮಾಡಿದ ಮಹಾಭಾರತದ ಅನುಶಾಸನ ಪರ್ವದ ಕೊನೆಯ ಅಪೂರ್ವ ಉಪದೇಶ ಈ ವಿಷ್ಣು ಸಹಸ್ರನಾಮ. ವ್ಯಾಸ ಮಹರ್ಷಿಗಳು ಈ ಸಾವಿರ ನಾಮವನ್ನು ಸ್ತೋತ್ರ ರೂಪದಲ್ಲಿ ನಮಗೆ ಕಾಣಿಕೆಯಾಗಿ ನೀಡಿದ್ದಾರೆ.

## ವೈಶಂಪಾಯನ ಉವಾಚ

ಶ್ರುತ್ವಾ ಧರ್ಮಾನಶೇಷೇಣ ಪಾವನಾನಿ ಚ ಸರ್ವಶಃ |
ಯುಧಿಷ್ಠಿರಃ ಶಾಂತನವಂ ಪುನರೇವಾಭ್ಯಭ್ಯಾಷತ || 1 ||

ವೈಶಂಪಾಯನು ನುಡಿದನು:

ಪಾಪಗಳನ್ನು ಕಳೆದು ಪರಿಶುದ್ಧವಾಗುವ ಎಲ್ಲಾ ಧರ್ಮಗಳ ಬಗ್ಗೆ ಸಮಗ್ರವಾಗಿ ಭೀಷ್ಮಾಚಾರ್ಯರಿಂದ ಕೇಳಿ ತಿಳಿದ ನಂತರ, ಯುಧಿಷ್ಠಿರ ಭೀಷ್ಮಾಚಾರ್ಯರಲ್ಲಿ ಈ ರೀತಿ ಪ್ರಶ್ನೆ ಹಾಕುತ್ತಾನೆ.

## ಯುಧಿಷ್ಠಿರ

ಕಿಮೇಕಂ ದೈವತಂ ಲೋಕೇ ಕಿಂ ವಾಪ್ಯೇಕಂ ಪರಾಯಣಂ |
ಸ್ತುವಂತಃ ಕಂ ಕಮರ್ಚಂತಃ ಪ್ರಾಪ್ನುಯುರ್ಮಾನವಾಃ ಶುಭಮ್ || 2 ||

ಕೋ ಧರ್ಮಃ ಸರ್ವಧರ್ಮಾಣಾಂ ಭವತಃ ಪರಮೋ ಮತಃ |
ಕಿಂ ಜಪನ್ಮುಚ್ಯತೇ ಜಂತುರ್ಜನ್ಮಸಂಸಾರಬಂಧನಾತ್ || 3 ||

ಎಲ್ಲ ಶಾಸ್ತ್ರಗಳು ಸಾರುವ ಹಿರಿಯ ದೇವತೆ ಯಾರು? ಒಬ್ಬನೇ ಒಬ್ಬ ಕೊನೆಯ ಆಸರೆ ಯಾರು? ಯಾರನ್ನು ಹಾಡಿ ಹೊಗಳುತ್ತ, ಆರಾಧಿಸುವುದರಿಂದ ಮಾನವನಿಗೆ ಒಳಿತು ?
ಯಾವುದು ಎಲ್ಲ ಧರ್ಮಗಳಿಗೂ ಮಿಗಿಲಾದ ಧರ್ಮ ಎಂದು ನಿಮ್ಮ ಅಭಿಮತ ? ಯಾವುದನ್ನು ಜಪಿಸುವುದರಿಂದ ಮಾನವ ಹುಟ್ಟಿನಿಂದ ಹಾಗು ಸಂಸಾರ ಬಂಧದಿಂದ ಮುಕ್ತಿ ಪಡೆಯುತ್ತಾನೆ ?

## ಭೀಷ್ಮ:

ಜಗತ್ಪ್ರಭುಂ ದೇವದೇವಮನಂತಂ ಪುರುಷೋತ್ತಮಮ್ |
ಸ್ತುವನ್ನಾಮಸಹಸ್ರೇಣ ಪುರುಷಃ ಸತತೋತ್ಥಿತಃ || 4 ||

ತಮೇವ ಚಾರ್ಚಯನ್ನಿತ್ಯಂ ಭಕ್ತ್ಯಾ ಪುರುಷಮವ್ಯಯಮ್ |
ಧ್ಯಾಯನ್ ಸ್ತುವನ್ನಮಸ್ಯಂಶ್ಚ ಯಜಮಾನಸ್ತಮೇವ ಚ || 5 ||

ಅನಾದಿ ನಿಧನಂ ವಿಷ್ಣುಂ ಸರ್ವಲೋಕಮಹೇಶ್ವರಮ್ |
ಲೋಕಾಧ್ಯಕ್ಷಂ ಸ್ತುವನ್ನಿತ್ಯಂ ಸರ್ವದುಃಖಾತಿಗೋ ಭವೇತ್ || 6 ||

ಬ್ರಹ್ಮಣ್ಯಂ ಸರ್ವಧರ್ಮಜ್ಞಂ ಲೋಕಾನಾಂ ಕೀರ್ತಿವರ್ಧನಮ್ |
ಲೋಕನಾಥಂ ಮಹದ್ಭೂತಂ ಸರ್ವಭೂತಭವೋದ್ಭವಮ್ || 7 ||

ಎಂದೂ ಎಡವದೇ ಎಚ್ಚರದಿಂದಿರುವ ಸಾಧಕ, ಜಗದ ಒಡೆಯನನ್ನು, ದೇವತೆಗಳಿಗೂ ಹಿರಿಯನಾದ ಹಿರಿದೈವವನ್ನು, ಆತನ ಸಾವಿರನಾಮಗಳಿಂದ ಸ್ತುತಿಸುತ್ತಾ; ಅಳಿವಿರದ ಆ ಪರಮಪುರುಷನನ್ನೇ ಅನುಗಾಲ ಭಕ್ತಿಯಿಂದ ಪೂಜಿಸುತ್ತ; ಅವನನ್ನೇ ಮನದಲ್ಲಿ ನೆನೆಯುತ್ತ, ಸದಾ ಸ್ತುತಿಸುತ್ತ, ತಲೆಬಾಗಿ ಆರಾಧಿಸುತ್ತಾ;

ತುದಿ-ಮೊದಲು ಇರದವನನ್ನು, ಎಲ್ಲೆಡೆ ತುಂಬಿರುವವನನ್ನು. ಎಲ್ಲ ಲೋಕಗಳ ಹಿರಿಯ ಒಡೆಯರಿಗೂ ಒಡೆಯನಾದವನನ್ನು, ಮೇಲೆ ನಿಂತು ಎಲ್ಲವನ್ನು ಕಾಣುತ್ತಿರುವವನನ್ನು;
ತಿಳಿದವರು ಮೆಚ್ಚುವವನನ್ನು, ಎಲ್ಲ ಧರ್ಮಗಳ ಬಲ್ಲವನನ್ನು, ಜೀವಗಳಿಗೆ ಜಸದ ಏರು ತೋರುವವನನ್ನು; ಜೀವ ಜಾತದ ಒಡೆಯನನ್ನು, ಎಲ್ಲ ಜೀವಗಳಿಗೂ ಬಾಳನಿತ್ತವನನ್ನು, ಹಿರಿಯ ತತ್ವವಾದ ನಾರಾಯಣನನ್ನು ಆರಾಧಿಸಬೇಕು.

ಏಷ ಮೇ ಸರ್ವಧರ್ಮಾಣಾಂ ಧರ್ಮೋಽಧಿಕತಮೋ ಮತಃ
ಯದ್ಭಕ್ತ್ಯಾ ಪುಂಡರೀಕಾಕ್ಷಂ ಸ್ತವೈರರ್ಚೇನ್ನರಃ ಸದಾ || 8 ||

ಭಗವಂತನನ್ನು ಅವನ ಗುಣದ ಅನುಸಂಧಾನದ ಮೂಲಕ ಸ್ತುತಿಸುವುದೇ ಧರ್ಮದಲ್ಲಿ ಶ್ರೇಷ್ಠವಾದ ಧರ್ಮ. ಸ್ತೋತ್ರಗಳಲ್ಲಿ ಶ್ರೇಷ್ಠವಾದ ಸ್ತೋತ್ರ ವಿಷ್ಣು ಸಹಸ್ರನಾಮ. ಭಗವಂತನ ಸ್ತೋತ್ರವನ್ನು ಶ್ರದ್ಧೆ-ಭಕ್ತಿಯಿಂದ, ವಿಶ್ವಾಸ-ನಂಬಿಕೆಯಿಂದ ಸ್ತುತಿಸುವುದು ಎಲ್ಲಾ ಧರ್ಮಗಳಿಗಿಂತ ಮಹತ್ತಾದ ಧರ್ಮ. ನಮ್ಮ ನಂಬಿಕೆ ಎಂತದ್ದೋ, ನಮ್ಮ ವ್ಯಕ್ತಿತ್ವ ಎಂತದ್ದೋ, ನಾವು ಪಡೆಯುವ ಫಲ ಅಂತದ್ದು. ನಂಬಿಕೆಯನ್ನು ಬೆಳೆಸಿಕೊಳ್ಳದಿದ್ದರೆ ಉಪಯೋಗವಿಲ್ಲ. ತಿಳಿಯದೇ ನಂಬದೇ ಪೂಜಿಸಿ ಉಪಯೋಗವಿಲ್ಲ. ಗೌರವಪೂರ್ವಕವಾಗಿ, ನಂಬಿಕೆಯಿಂದ, ಸ್ತೋತ್ರಗಳಿಂದ ಹಾಡಿ ಕೊಂಡಾಡಿ ಪೂಜಿಸುವುದು ಶ್ರೇಷ್ಠವಾದ ಧರ್ಮ.

ಪರಮಂ ಯೋ ಮಹತ್ತೇಜಃ ಪರಮಂ ಯೋ ಮಹತ್ತಪಃ |
ಪರಮಂ ಯೋ ಮಹದ್ಬ್ರಹ್ಮ ಪರಮಂ ಯಃ ಪರಾಯಣಮ್ || 9 ||

ಭಗವಂತ ಬೆಳಕುಗಳಿಗೆ ಬೆಳಕು ನೀಡುವ ಸ್ವರೂಪ, ಎಲ್ಲರ ಚಿಂತನೆಯ ಕೊನೆಯ ಗುರಿ, ಎಲ್ಲ ಜ್ಞಾನದ ಗಮ್ಯ ಆ ಭಗವಂತ. ಇಲ್ಲಿ ಭಗವಂತನನ್ನು 'ಪರಮ ಮಹಾ ಬ್ರಹ್ಮ' ಎನ್ನುತ್ತಾರೆ. ಇಲ್ಲಿ ಬ್ರಹ್ಮ ಎಂದರೆ ಜೀವರು; ಪರಬ್ರಹ್ಮ ಎಂದರೆ ಮುಕ್ತರಾದ ಜೀವರು; ಪರಮಬ್ರಹ್ಮ ಎಂದರೆ ಶ್ರೀತತ್ವ, ನಿತ್ಯ ಮುಕ್ತಳಾದ ಶ್ರೀಲಕ್ಷ್ಮಿ. ಪರಮ ಮಹಾ ಬ್ರಹ್ಮ ಎಂದರೆ ನಾರಾಯಣ. ಭಗವಂತ ಪರಾಯಣರಿಗೂ ಕೂಡಾ ಪರಮ. ಇಲ್ಲಿ ಪರಾಯಣರು ಎಂದರೆ ನಮಗೆ ಆಸರೆಯಾಗಿರುವ ತತ್ವಾಭಿಮಾನಿ ದೇವತೆಗಳು. ಭಗವಂತ ಸರ್ವ ದೇವತೆಗಳ ಒಡೆಯ.

ಪವಿತ್ರಾಣಾಂ ಪವಿತ್ರಂ ಯೋ ಮಂಗಲಾನಾಂ ಚ ಮಂಗಲಮ್ |
ದೈವತಂ ದೇವತಾನಾಂ ಚ ಭೂತಾನಾಂ ಯೋಽವ್ಯಯಃ ಪಿತಾ || 10 ||

ಪವಿತ್ರ ಎಂದರೆ ಪಾವನಗೊಳಿಸುವಂತದ್ದು. ನಾವು ನಿರ್ಮಲವಾಗಬೇಕಾದರೆ, ಆ ಪರಮ ಪವಿತ್ರನಾದ ಭಗವಂತನಲ್ಲಿ ಶರಣಾಗಬೇಕು. ಆತ ಪಾವನಗಳಿಗೆ ಪಾವನನಾದವನು; ಒಳಿತುಗಳಿಗೆ ಒಳಿತಾದವನು; ದೇವತೆಗಳಿಗೂ ಹಿರಿ ದೈವ, ಜೀವರಿಗೆ ಅಳಿವಿರದ ಅಪ್ಪ.

ಯತಃ ಸರ್ವಾಣಿ ಭೂತಾನಿ ಭವಂತ್ಯಾದಿಯುಗಾಗಮೇ |
ಯಸ್ಮಿಂಶ್ಚ ಪ್ರಲಯಂ ಯಾಂತಿ ಪುನರೇವ ಯುಗಕ್ಷಯೇ || 11 ||

ಸೃಷ್ಟಿ ಕಾಲದಲ್ಲಿ ಭಗವಂತನಿಂದ ಈ ಕಾಣುವ ಸೃಷ್ಟಿ ನಿರ್ಮಾಣವಾಗುತ್ತದೆ. ಎಲ್ಲ ಜೀವಗಳು ಹುಟ್ಟಿ ಬರುತ್ತವೆ, ಪ್ರಳಯಕಾಲದಲ್ಲಿ ಕಾಣುವ ರೂಪ ಕಳೆದುಕೊಂಡು ಸೂಕ್ಷ್ಮ ರೂಪದಲ್ಲಿ ಆ ಭಗವಂತನನ್ನು ಹೋಗಿ ಸೇರುತ್ತವೆ. ಪ್ರತಿಯೊಂದು ಕ್ರಿಯೆ ವ್ಯವಸ್ಥಿತವಾಗಿ, ಗಣಿತಬದ್ಧವಾಗಿ ನಡೆಯುತ್ತದೆ. ಇಲ್ಲಿ ಯಾವುದೂ ಆಕಸ್ಮಿಕವಲ್ಲ.

ತಸ್ಯ ಲೋಕಪ್ರಧಾನಸ್ಯ ಜಗನ್ನಾಥಸ್ಯ ಭೂಪತೇ |
ವಿಷ್ಣೋರ್ನಾಮಸಹಸ್ರಂ ಮೇ ಶ್ರುಣು ಪಾಪಭಯಾಪಹಮ್ || 12 ||

ಭಗವಂತ ನಮ್ಮ ಪಾಪ ಭಯವನ್ನು ತೊಡೆದು ಹಾಕುತ್ತಾನೆ. ತಪ್ಪು ಮಾಡಿದಾಗ ತಿದ್ದಿ ಉದ್ಧಾರ ಮಾಡುತ್ತಾನೆ. "ಓ ಭೂಪತಿ , ಎಲ್ಲ ಶಾಸ್ತ್ರಗಳ ಮುಖ್ಯ ವಾಚ್ಯನಾದ ಜಗದೊಡೆಯನಾದ ಇಂತಹ ವಿಷ್ಣುವಿನ, ಸಾವಿರ ನಾಮಗಳನ್ನು ಆಲಿಸು".

ಯಾನಿ ನಾಮಾನಿ ಗೌಣಾನಿ ವಿಖ್ಯಾತಾನಿ ಮಹಾತ್ಮನಃ |
ಋಷಿಭಿಃ ಪರಿಗೀತಾನಿ ತಾನಿ ವಕ್ಷ್ಯಾಮಿ ಭೂತಯೇ || 13 ||

"ಪ್ರಾಚೀನ ಋಷಿ-ಮುನಿಗಳು, ಮಹಾತ್ಮರು, ನಿರಂತರ ಉಪಾಸನೆ ಮಾಡಿಕೊಂಡು ಬಂದಿರುವ ಆ ಪರಮಾತ್ಮನ ಗುಣವನ್ನು ಸಾರುವ, ಹೆಸರಾಂತ ಸಾವಿರ ನಾಮಗಳನ್ನು ಹೇಳುತ್ತೇನೆ" ಎಂದು ಭೀಷ್ಮಾಚಾರ್ಯರು ವಿಷ್ಣು ಸಹಸ್ರನಾಮವನ್ನು, ಶ್ರೀಕೃಷ್ಣನ ಸಮ್ಮುಖದಲ್ಲಿ ಧರ್ಮರಾಯನಿಗೆ ಉಪದೇಶ ಮಾಡುತ್ತಾರೆ.

ಭಗವಂತನ ನಾಮವನ್ನು ಸ್ತ್ರೀ-ಪುರುಷ-ನಪುಂಸಕ ಲಿಂಗಗಳಲ್ಲಿ ಕಾಣಬಹುದು. ಸ್ತ್ರೀ-ಪುರುಷರಲ್ಲಿರುವ ಸರ್ವ ಗುಣಗಳಿಂದ ಪೂರ್ಣನಾದ ಭಗವಂತನಲ್ಲಿ ಯಾವುದೇ ರೀತಿಯ ಸ್ತ್ರೀ-ಪುರುಷ ಗುಣದೋಷಗಳಿಲ್ಲ. ಈ ರೀತಿ ಲಿಂಗ ಸಮನ್ವಯ ಭಗವಂತನಲ್ಲಿ ಮಾತ್ರ ಸಾಧ್ಯ. ಸಾಮಾನ್ಯವಾಗಿ ಯಾವುದೇ ಪೂಜೆ-ಕರ್ಮವನ್ನು ಮಾಡುವಾಗ ವಿಘ್ನನಿವಾರಕನಾದ ಗಣಪತಿ ಪೂಜೆ ಮಾಡುವುದು ಸಂಪ್ರದಾಯ. ಅದಕ್ಕಾಗಿ ಗಣಪತಿ ಮಂಡಲ ಬರೆದು ಪೂಜಿಸಿ ನಂತರ ಇತರ ಕರ್ಮವನ್ನು ಮಾಡುತ್ತಾರೆ.

ವಕ್ರತುಂಡ ಮಹಾಕಾಯ ಕೋಟಿ ಸೂರ್ಯ ಸಮಪ್ರಭ
ನಿರ್ವಿಘ್ನಂ ಕುರು ಮೇ ದೇವ ಸರ್ವ ಕಾರ್ಯೇಷು ಸರ್ವದ
ಶುಕ್ಲಾಂಬರದರಂ ವಿಷ್ಣುಂ ಶಶಿವರ್ಣಂ ಚತುರ್ಭುಜಂ
ಪ್ರಸನ್ನ ವದನಂ ಧ್ಯಾಯೇತ್ ಸರ್ವ ವಿಘ್ನೋಪ ಶಾಂತಯೇ

ಹೀಗೆ ವಿಘ್ನ ನಿವಾರಕ ಗಣಪತಿ ಸ್ತುತಿ ಮೊದಲಿಗೆ. ವಿಷ್ಣು ಸಹಸ್ರನಾಮ ಭಗವಂತನ 'ವಿಶ್ವಮ್' ಎನ್ನುವ ವಿಘ್ನನಿವಾರಕ 'ವಿಶ್ವಂಭರ' ರೂಪದ ನಾಮದಿಂದ ಪ್ರಾರಂಭವಾಗುತ್ತದೆ. ನಮ್ಮ ಜೀವನದಲ್ಲಿರುವ ಮೂರು ಅವಸ್ಥೆಗಳಲ್ಲಿ (ಎಚ್ಚರ-ಕನಸು-ನಿದ್ದೆ), ನಮ್ಮ ಎಚ್ಚರವನ್ನು ನಿಯಂತ್ರಿಸುವ ಭಗವಂತನ ರೂಪ 'ವಿಶ್ವ' ನಾಮಕ ರೂಪ.

ಬನ್ನಿ, ವಿಘ್ನನಾಶಕ ವಿಶ್ವಂಭರನಾಗಿ, ನಮಗೆ ಎಚ್ಚರವನ್ನು ಕೊಟ್ಟು, ವಿಷ್ಣುಸಹಸ್ರನಾಮ ಚಿಂತನೆ ಮಾಡುವಂತೆ ಮಾಡು ಎಂದು ಆ ಭಗವಂತನಲ್ಲಿ ಪ್ರಾರ್ಥಿಸಿ, ಆತನ ನಾಮದಲ್ಲಿ ಅವನ ಗುಣದ ಅನುಸಂಧಾನ ಮಾಡೋಣ.

# ವಿಷ್ಣು ಸಹಸ್ರನಾಮ ವಿವರಣೆ

## 1) ವಿಶ್ವಮ್

ವಿಷ್ಣು ಸಹಸ್ರನಾಮದ ಮೊದಲ ನಾಮ ವಿಶ್ವಂ. ಈ ಹಿಂದೆ ಹೇಳಿದಂತೆ ವಿಷ್ಣು ಸಹಸ್ರನಾಮ ಸರ್ವ ವೇದಗಳ ಸಾರ. ಇಲ್ಲಿ 'ವಿ ' ಎಂದರೆ ಪಕ್ಷಿ ಅನ್ನುವ ಅರ್ಥವನ್ನೂ, ಶ್ವ ಎಂದರೆ ಚಲಿಸುವವನು ಎನ್ನುವ ಅರ್ಥವನ್ನು ಕೊಡುತ್ತದೆ . ಆದ್ದರಿಂದ ವೇದಗಳ ಅಭಿಮಾನಿ ದೇವತೆಯಾದ ಗರುಡನನ್ನು ತನ್ನ ವಾಹನವಾಗಿರಿಸಿಕೊಂಡಿರುವ ಭಗವಂತ ವಿಶ್ವ . ಮೇಲೆ ಹೇಳಿದ ಅರ್ಥವಲ್ಲದೆ ಇನ್ನೂ ಹತ್ತು ಹಲವು ಅರ್ಥಗಳನ್ನು ವಿಶ್ವ ಅನ್ನುವ ನಾಮದಲ್ಲಿ ನಾವು ನೋಡಬಹುದು. ಚತುರ್ಮುಖ ಬ್ರಹ್ಮನನ್ನು ವಿಶ್ವ ಎಂದು ಕರೆಯುತ್ತಾರೆ. ಸೃಷ್ಟಿಕರ್ತನಾದ ಬ್ರಹ್ಮನನ್ನು ತನ್ನ ನಾಭಿಯಲ್ಲಿ ಧರಿಸಿರುವ ಭಗವಂತ, ಆತನ ಮೂಲಕ ಈ ಸೃಷ್ಟಿಗೆ ಕಾರಣಕರ್ತನಾಗಿದ್ದಾನೆ . ಆದ್ದರಿಂದ ಆತ ವಿಶ್ವಂ. ಆಂಜನೇಯ ರೂಪಿ ಮುಖ್ಯಪ್ರಾಣನನ್ನು ಕೂಡ ವಿಶ್ವ ಎಂದು ಕರೆಯುತ್ತಾರೆ. ನಮ್ಮ ದೇಹಕ್ಕೆ ಚಲನೆಯನ್ನು ಕೊಡುವಂತಹ, ಪ್ರಾಣಶಕ್ತಿಯಾದ ಮುಖ್ಯಪ್ರಾಣನಲ್ಲಿ ತುಂಬಿದ್ದು, ನಮ್ಮ ದೇಹದಲ್ಲಿ ಬಿಂಬರೂಪದಲ್ಲಿ ಪ್ರವೇಶಿಸಿ (ವಿಶತಿ), ಅಂತರ್ಯಾಮಿಯಾಗಿ ದೇಹದ ಒಳಗೂ ಹೊರಗೂ ತುಂಬಿರುವ ಪರಿಪೂರ್ಣ ಜ್ಞಾನಾನಂದಮಯನಾದ ಭಗವಂತ ವಿಶ್ವಂ.

## 2) ವಿಷ್ಣು

ಸಾಮಾನ್ಯವಾಗಿ ವಿಷ್ಣು ಅನ್ನುವ ನಾಮ ಒಬ್ಬ ವ್ಯಕ್ತಿಗೆ ಸಂಬಂದಿಸಿದ್ದು ಎಂದು ತಿಳಿಯುವವರೇ ಹೆಚ್ಚು. ಆದರೆ ಹಿಂದೂ-ಮುಸ್ಲಿಂ-ಕ್ರೈಸ್ತ ಧರ್ಮದಲ್ಲಿ ದೇವರು ಎನ್ನುವುದಕ್ಕೆ ಯಾವ ವಿಶ್ಲೇಷಣೆ ಇದೆಯೋ ಅದರ ಸಂಸ್ಕೃತ ಪದ ವಿಷ್ಣು !! ವಿಷ್ಣು ಅಂದರೆ ಸರ್ವಶಬ್ದ ವಾಚ್ಯನಾದ, ಸರ್ವಗತನಾದ ಭಗವಂತ ಎಂದರ್ಥ. ಇದು ಜಾತಿ ಧರ್ಮವನ್ನು ಮೀರಿ ಎಲ್ಲರೂ ಒಪ್ಪುವಂತ ಅರ್ಥ. ಇನ್ನು ಈ ಪದವನ್ನು ಒಡೆದು ನೋಡಿದರೆ ವಿ-ಷ-ಣು

ಆಗುತ್ತದೆ. ವಿಷಣು ಎಂದರೆ-ವಿಶಿಷ್ಟವಾದ ಜ್ಞಾನ(ವಿ) ಕೊಡುವವನು. ಒಳಗೆ ಇದ್ದು, ಸಂಸಾರ ವಿಷವನ್ನು ಪರಿಹರಿಸಿ, ನಮ್ಮ ಕ್ರಿಯೆಯನ್ನು ನಿಯಂತ್ರಿಸುವ ಪರಿಪೂರ್ಣವಾದ (ಷ) ಪ್ರಾಣಶಕ್ತಿ . ಹಾಗೂ ಎಲ್ಲರನ್ನು ರಕ್ಷಿಸುವ ಬಲ ಇರುವ (ಣ) ಸರ್ವ ಶಕ್ತ ಭಗವಂತ ವಿಷ್ಣು.

### 3) ವಷಟ್ಕಾರ

ಭಗವಂತನನ್ನು ವಷಟ್ಕಾರ ಎಂದು ಕರೆಯುತ್ತಾರೆ ಎನ್ನುವ ವಿಷಯ ಹೆಚ್ಚಿನವರಿಗೆ ತಿಳಿದಿಲ್ಲ. ಹಿಂದಿನ ಕಾಲದಲ್ಲಿ ವೈದಿಕ ಸಂಪ್ರದಾಯವಿರುವ ಪ್ರತಿಯೊಂದು ಮನೆಗಳಲ್ಲಿ ಅಗ್ನಿಹೋತ್ರ ಮಾಡುವುದು ನಿತ್ಯ ಕರ್ಮವಾಗಿತ್ತು. ಅಗ್ನಿಹೋತ್ರದಲ್ಲಿ ಭಗವಂತನಿಗೆ ಐದು ಮಂತ್ರಗಳಿಂದ (ಯಜ್ಞ ನಾಮಕ , ಯಜ್ಞ ಪುರುಷ , ಯಜ್ಞೇಶ್ವರ , ಯಜ್ಞ ಭಾವನ , ಯಜ್ಞ ಭೋಕ್ತ ) ಆಹುತಿಯನ್ನು ಕೊಡುತ್ತಿದ್ದರು. ಈ ಮಂತ್ರದಲ್ಲಿ ಬರುವ ಐದನೇ ಹೆಸರು ಭಗವಂತನ ವಷಟ್ಕಾರ ಅನ್ನುವ ಹೆಸರು.

### 4) ಭೂತಭವ್ಯಭವತ್ಪ್ರಭುಃ

ಭಗವಂತ ಎಲ್ಲಾ ಕಾಲದಲ್ಲೂ ಈ ಲೋಕವನ್ನು ರಕ್ಷಿಸುತ್ತಿರುತ್ತಾನೆ. ಹಿಂದೆ ಅನಂತವಾಗಿ ಇದ್ದದ್ದು (ಭೂತಕಾಲದಲ್ಲಿ) ಮುಂದೆ ಬರುವ ಅನಂತ ಭವಿಷ್ಯತ್ ಕಾಲ ಹಾಗು ವರ್ತಮಾನ ಕಾಲದಲ್ಲಿ ಈ ಲೋಕವನ್ನು ರಕ್ಷಿಸುವವನು. ಈ ನಾಮವನ್ನು ನಾವು ಒಡೆದು ನೋಡಿದಾಗ ಭೂತ+ಭವಿ+ಭವಂತಿ+ಪ್ರಭು ಎನ್ನುವ ನಾಲ್ಕು ಪದಗಳನ್ನು ನೋಡಬಹುದು. ಭೂತಿಯನ್ನು ಪಡೆದವರು ಭೂತಗಳು ಅಂದರೆ ಮುಕ್ತಿಗೆ ಯೋಗ್ಯರಾದ ಸಾತ್ವಿಕರು , ಭವಿಗಳು ಎಂದರೆ ಸಂಸಾರಿಗಳು ಅಥವಾ ರಾಜಸರು , ಭವಂತಿ ಎಂದರೆ ಜೀವನದಲ್ಲಿ ಎತ್ತರಕ್ಕೆ ಏರದ ತಾಮಸರು. ಆದ್ದರಿಂದ ಭೂತಭವ್ಯಭವತ್ಪ್ರಭುಃ ಎಂದರೆ ಸಾತ್ವಿಕರಿಗೂ , ರಾಜಸರಿಗೂ ಹಾಗು ತಾಮಸರಿಗೂ ಪ್ರಭು ಎಂದರ್ಥ. ಈ ರೀತಿ ಹಿಂದೆ ಇದ್ದವನು, ಈಗಲೂ ಇರುವವನು, ಮುಂದೆ ಎಂದೆಂದೂ ಎಲ್ಲರ ಪ್ರಭುವಾಗಿ ಸರ್ವ ಜೀವ ರಕ್ಷಕನಾಗಿರುವ ಭಗವಂತ ಭೂತಭವ್ಯಭವತ್ಪ್ರಭುಃ

### 5) ಭೂತಕೃತ್

ಸಂಸ್ಕೃತದಲ್ಲಿ ಕೃತ್ ಅನ್ನುವ ಪದಕ್ಕೆ ಎರಡು ಅರ್ಥವಿದೆ.

೧. ಸೃಷ್ಟಿ

೨. ಸಂಹಾರ

ಅದೇ ರೀತಿ ಭೂತಗಳಲ್ಲಿ ಎರಡು ವಿಧ

೧. ಅಚೇತನ ಭೂತ ಅಂದರೆ ಪಂಚಭೂತಗಳು (ಮಣ್ಣು ,ಬೆಂಕಿ, ನೀರು, ಗಾಳಿ ಮತ್ತು ಆಕಾಶ)

೨. ಚೇತನ ಭೂತ ಅಂದರೆ ಪಂಚಭೂತಗಳಿಂದ ಆದ ಜೀವಗಳು.

ಭೂತಕೃತ್ (ಸೃಷ್ಟಿ) ಅಂದರೆ ಪಂಚಭೂತಗಳ ಸೃಷ್ಟಿಕರ್ತ,ಪಂಚಭೂತಾತ್ಮಕವಾದ ಬ್ರಹ್ಮಾಂಡ ಸೃಷ್ಟಿಕರ್ತ. ಬ್ರಹ್ಮಾಂಡದಲ್ಲಿ ಪಂಚಭೂತಗಳಿಂದಾದ ಪಿಂಡಾಂಡ ಸೃಷ್ಟಿ ಮಾಡಿದವ , ಪಿಂಡಾ0ಡದಲ್ಲಿ ಜೀವವನ್ನು ಇರಿಸಿ ದೇಹ ಸೃಷ್ಟಿ ಮಾಡಿದವ, ಮತ್ತು ಸಾಧನೆ ಮೂಲಕ ಜೀವರಿಗೆ ಮುಕ್ತಿಯನ್ನು ಕರುಣಿಸುವವ.
ಭೂತಕೃತ್ (ಸಂಹಾರ) ಅಂದರೆ ದೇಹ ನಾಶದ ಮೂಲಕ ಜೀವರನ್ನು ನಾಶ ಮಾಡಿದವ, ಅಭಿವೃದ್ಧಿ ಹೊಂದದ ತಾಮಸ ಜೀವರನ್ನು ನಾಶ ಮಾಡಿದವ, ಪಂಚಭೂತಾತ್ಮಕವಾದ ಶರೀರ ನಾಶ ಮಾಡಿದವ, ಪಂಚಭೂತಾತ್ಮಕವಾದ ಬ್ರಹ್ಮಾಂಡ ನಾಶ ಮಾಡಿದವ , ಪ್ರಳಯ ಕಾಲದಲ್ಲಿ ಪಂಚಭೂತಗಳನ್ನೂ ನಾಶ ಮಾಡುವವ.

## 6) ಭೂತಭೃತ್

ಸೃಷ್ಟಿ-ಸ್ಥಿತಿ-ಲಯದಲ್ಲಿ ಪಂಚಭೂತಗಳ ಧಾರಣೆ ಮಾಡಿದವ,ಪಂಚಭೂತಾತ್ಮಕವಾದ ಬ್ರಹ್ಮಾಂಡ ಧಾರಣೆ ಮಾಡಿದವ, ಪಂಚಭೂತಗಳಿಂದಾದ ಪಿಂಡಾ0ಡ ಧಾರಣೆ ಮಾಡಿದವ, ಪಿಂಡಾ0ಡದಲ್ಲಿರುವ ಜೀವವನ್ನು ಧಾರಣೆ ಮಾಡಿದವ ಮತ್ತು ಮುಕ್ತಿಯನ್ನು ಪಡೆದ ಜೀವವನ್ನು ಧಾರಣೆ ಮಾಡಿದವ.

## 7) ಭಾವಾಯ

ಸೃಷ್ಟಿ-ಸ್ಥಿತಿ-ಲಯ ಇದು ಭಗವಂತನ ಗುಣ. ಆತ ಸಚ್ಚಿದಾನಂದ. ಹುಟ್ಟು-ಸಾವು ನೈಸರ್ಗಿಕ ಕ್ರಿಯೆ. ಸಾವು ಹುಟ್ಟಿನ ಮೂಲ, ಹುಟ್ಟು ಸಾವಿನ ಮೂಲ. ಭಗವಂತ ಎಂದೆಂದಿಗೂ ಶಾಶ್ವತವಾಗಿ ಇರುವವನು. ಭಾವ ಅಂದರೆ ಸಚ್ಚಿದಾನಂದ ಸ್ವರೂಪ.

## 8) ಭೂತಾತ್ಮಾ

ಪಂಚಭೂತಗಳಲ್ಲಿ ವ್ಯಾಪಿಸಿದವ, ಬ್ರಹ್ಮಾಂಡದಲ್ಲಿ ವ್ಯಾಪಿಸಿದವ, ಪಿಂಡಾ0ಡದಲ್ಲಿ ತುಂಬಿರುವವ, ಎಲ್ಲಾ ಜೀವದಲ್ಲಿ ಅಂತರ್ಯಾಮಿ ಆಗಿ ತುಂಬಿರುವವ. ಭೂತಿಯನ್ನು( ಉನ್ನತಿ) ಹೊಂದಿದ ಜೀವಿಗಳಿಗೆ ಮುಕ್ತಿಯನ್ನು ಕರುಣಿಸುವವ ಭೂತಾತ್ಮಾ.

## 9) ಭೂತಭಾವನಃ

ಸೃಷ್ಟಿ-ಸ್ಥಿತಿ-ಸಂಹಾರಗಳಿಗೆ ಕಾರಣವಾದವ ,ಜೀವಿಗಳಿಗೆ ಸುಖ-ದುಃಖ ಕೊಡುವವ ಭೂತಭಾವನಃ.

## 10)ಪೂತಾತ್ಮಾ 11)ಪರಮಾತ್ಮಾ

ಆತ್ಮ- ಅಂದರೆ ->ದೇಹ ? ಅಲ್ಲ !!! ಭಾವನೆಗಳ ಗೂಡಾದ ಮನಸ್ಸು? ಅಲ್ಲ !! ಏಕೆಂದರೆ ಮನಸ್ಸಿನಿಂದ ಯೋಚಿಸುವುದರಿಂದ ಮನಸ್ಸನ್ನು ನಿಯಂತ್ರಿಸುವವ ಯಾರು ? ಅದೇ ಜೀವ -ಆತ್ಮ. ಆದರೆ ಈ ಜೀವವನ್ನು ನಿಯಂತ್ರಿಸುವ ಶಕ್ತಿ ಯಾರು ? ಆತನೇ -ಪರಮಾತ್ಮ (ಎಲ್ಲಾ ಆತ್ಮಗಳಿಗೂ ಪರಮವಾದ ಆತ್ಮ)

## 12) ಮುಕ್ತಾನಾಂ ಪರಮಾ ಗತಿಃ

ಚತುರ್ಮುಖನ ಆಯಸ್ಸು ನೂರು ಕಲ್ಪ.ಒಂದು ಕಲ್ಪ ಅಂದರೆ 31 ಸಾವಿರದ 104 ಸಾವಿರ ಕೋಟಿ ವರ್ಷ . ಮಾನವನ ಸಾಧನೆ ಒಂದು ಕಲ್ಪ. ಮುಕ್ತಿ ಸ್ಥಿತಿಯಲ್ಲಿ ಮಾನವನ ಜೊತೆಗೆ ಚತುರ್ಮುಖ ಬ್ರಹ್ಮರು (ಮುಕ್ತಿಯಲ್ಲಿರುವ ಚತುರ್ಮುಖರು) ಮಾರ್ಗದರ್ಶಕನಾಗಿ ಇರುತ್ತಾರೆ.ಮುಕ್ತಾನಾಂ ಪರಮಾ ಗತಿಃ ಅಂದರೆ : ಮುಕ್ತಿ ಪಡೆದವರಿಗೆ ಮುಕ್ತಿಯಲ್ಲೂ ಚತುರ್ಮುಖ ಬ್ರಹ್ಮರೊಂದಿಗೆ ಶ್ರೇಷ್ಠ ಮಾರ್ಗದರ್ಶನ ಮಾಡುವವನು, ಹಾಗು ಚತುರ್ಮುಖ ಬ್ರಹ್ಮರಿಗೂ ಶ್ರೇಷ್ಠ ಮಾರ್ಗದರ್ಶನ ಮಾಡುವವನು, ಮತ್ತು ಮುಕ್ತಿ ಪಡೆದ ಎಲ್ಲಾ ಆತ್ಮರಿಗೆ ತಾಯಿಯಾಗಿರುವ ಸ್ತ್ರೀ ತತ್ವ ಚೇತನ ಲಕ್ಷ್ಮಿಗೂ ಆಶ್ರಯದಾತನಾಗಿರುವವನು.

## 13) ಅವ್ಯಯಃ (ಆಯ-ವ್ಯಯ)

ಎಲ್ಲಾ ವಸ್ತುವಿನ ಒಳಗಿದ್ದೂ(ಆಯ) ಏಕರೂಪನಾಗಿ ಇರುವವನು (ಆನೆ ಮತ್ತು ಇರುವೆ ಒಳಗೆ ಇರುವ ಭಗವಂತ ಒಬ್ಬನೇ ಬೇರೆ ಬೇರೆ ಅಲ್ಲ )

ವ್ಯಯ ಅಂದರೆ ಕಮ್ಮಿ ಆಗುವುದು ,ಖರ್ಚು ,ನಾಶ ಇತ್ಯಾದಿ ಯಾವುದು, ಯಾವ ಕಾಲದಲ್ಲೂ ಕಡಿಮೆ ಆಗದೆ, ನಾಶವಾಗದೆ, ಅನಾದಿ-ಅನಂತ ಕಾಲದಲ್ಲಿ, ಏಕರೂಪನಾಗಿ ಇರುವ ಶಾಶ್ವತ ತತ್ವ .

## ಪುರುಷಃ

ಪುರು+ಷಃ ಇದು ತುಂಬಾ ಪ್ರಮುಖವಾದ ನಾಮ. ವೇದದ ಸಾರಭೂತವಾದ ಪುರುಷ-ಸೂಕ್ತದಲ್ಲಿ ಬರುವಂತಹ ಸೂಕ್ತಗಳ ಪ್ರತಿಫಲದ ರೂಪವೇ ಭಗವಂತನ ಪುರುಷ ನಾಮಕವಾದ ರೂಪ. ಪುರು ಅಂದರೆ ಎಲ್ಲಕ್ಕಿಂತ ದೊಡ್ಡದು ಅನಂತ.

-ಬ್ರಹ್ಮಾಂಡ ರಚನೆ ಆಗುವ ಮುಂಚೆ ಬ್ರಹ್ಮಾಂಡ ಸೃಷ್ಟಿ ಆದ ಮೇಲೂ ಅನಂತವಾಗಿ ತುಂಬಿರುವವ.

ಪು- ಎಲ್ಲವನ್ನು ಪಾವನ ಗೊಳಿಸುವವನು.

ರು- ತಾನು ಒಳಗಿದ್ದು- ಶತ್ರು , ಅಜ್ಞಾನ, ದುಃಖ ತಡೆದು, ಜೀವವನ್ನು ಉದ್ಧಾರ ಮಾಡುವವನು.

ಷಃ- ಎಲ್ಲೆಡೆ ಮಲಗಿದವ (ಮಲಗಿದವ ಅಂದರೆ ಅನಾಯಾಸವಾಗಿ ಎಲ್ಲಾ ಕಾರ್ಯ ಮಾಡುವವ)

## 15)ಸಾಕ್ಷೀ

ಎಲ್ಲವನ್ನು ಕಣ್ಣಾರೆ ಕಾಣಬಲ್ಲವ. ಭಗವಂತನ ಮುಂದೆ ನಾವು ಮುಚ್ಚಿಕೊಳ್ಳುವುದು ಏನೂ ಇಲ್ಲ .ಭಗವಂತನ ಮುಂದೆ ನಾವೆಲ್ಲರೂ ಬತ್ತಲು, ಆತನ ಮುಂದೆ ಮುಚ್ಚಿಟ್ಟುಕೊಂಡು ಮಾಡುವ ಯಾವ ಕೆಲಸವೂ ಇಲ್ಲ. ಭಗವಂತನ ಮುಂದೆ ನಾವು ಬತ್ತಲಾಗದೆ ಭಗವಂತ ನಮಗೆ ಎಂದೂ ಬಿಚ್ಚಿಕೊಳ್ಳುವುದಿಲ್ಲ . ಆದುದರಿಂದ ಭಗವಂತ ಎಲ್ಲವನ್ನು ಕಾಣಬಲ್ಲ ಸಾಕ್ಷಿ. ಅಕ್ಷಿಗಳು ಅಂದರೆ ಇಂದ್ರಿಯ ಉಳ್ಳವರು, ಅಂದರೆ ನಾವು-ನೀವು ; - ಅಕ್ಷಿಗಳ ಸಖನಾಗಿ ನಮ್ಮನ್ನು ಉದ್ಧಾರ ಮಾಡುವವನು ಸಾಕ್ಷಿ

## 16)ಕ್ಷೇತ್ರಜ್ಞ

ಅಂದರೆ ಕ್ಷೇತ್ರವನ್ನು ತಿಳಿದವನು. ಕ್ಷೇತ್ರ ಅಂದರೆ ನಾವು ವಾಸ ಮಾಡುವ ನೆಲೆ . ನಾವು ವಾಸ ಮಾಡುವುದು ಈ ಬ್ರಹ್ಮಾಂಡದಲ್ಲಿ(ಚತುರ್ಮುಖನ ಕ್ಷೇತ್ರ) ಮತ್ತು ಜೀವದ ನೆಲೆ ಶರೀರ (ನಮ್ಮ ಕ್ಷೇತ್ರ). ಕ್ಷೇತ್ರಜ್ಞ ಅಂದರೆ ,ಈ ಬ್ರಹ್ಮಾಂಡವನ್ನು ಮತ್ತು ಈ ಶರೀರವನ್ನು ,ಈ ಪ್ರಪಂಚದ ರಹಸ್ಯವನ್ನು ಸಂಪೂರ್ಣ ತಿಳಿದವನು.

## 17)ಅಕ್ಷರ

ಅಕ್ಷರ ಅಂದರೆ ನಾಶವಿಲ್ಲದ್ದು ಲಿಪಿ ಅಕ್ಷರ ಅಲ್ಲ. ಲಿಪಿ ಕೇವಲ ಅಕ್ಷರದ ಪ್ರತೀಕ. ಲಿಪಿ ನಾಶವಾಗಬಹುದು ಆದರೆ ಅಕ್ಷರಗಳಿಗೆ ನಾಶವಿಲ್ಲ. ನಮ್ಮಿಂದ ಹೊರಹೊಮ್ಮುವ ಎಲ್ಲಾ ನುಡಿ ಈ ಆಕಾಶದಲ್ಲಿ ಧ್ವನಿಮುದ್ರಿತ ಆಗಿ ಶಾಶ್ವತವಾಗಿ ಇರುತ್ತದೆ.

೧. ಅಕ್ಷರ ಅಂದರೆ ಯಾವುದು ಎಲ್ಲಾ ಕಡೆ ವ್ಯಾಪಿಸಿದೆಯೋ ಅದು ಅಕ್ಷರ

೨>ಕ್ಷರ ಅಂದರೆ ನಾಶ, ಅ+ಕ್ಷರ =>ನಾಶವಿಲ್ಲದ್ದು

೩. ಕ್ಷರಣ ಅಂದರೆ => ಸುರಿಸುವವನು. ಅಕ್ಷರ ಅಂದರೆ ಯುಗ ಯುಗಾಂತರದಲ್ಲಿ ನಮ್ಮ ಮೇಲೆ ಕರುಣೆಯ ಮಳೆ ಸುರಿಸುವವನು.

೪. ಅಕ್ಷ ಅಂದರೆ ಇಂದ್ರಿಯ,ರ =>ರಮಣ ಅಂದರೆ ರಮಿಸುವವನು. ಅಕ್ಷ+ರ =>ಅಕ್ಷರ ಅಂದರೆ ಆನಂದಮಯನಾಗಿ ಇಂದ್ರಿಯದಲ್ಲಿ ನೆಲೆಸಿರುವವನು

೫. ಅಕ್ಷರ ಅಂದರೆ ಅ ನಿಂದ ಕ್ಷ ವರೆಗೆ ಇರುವ ಎಲ್ಲಾ ವರ್ಣಗಳಿಂದ ಉತ್ಪನ್ನವಾಗುವ ಅನಂತಾನಂತ ಶಬ್ದಗಳಲ್ಲಿ ರಮಿಸುವವನು.

೬. ಅ => ಅಲ್ಲ/ಇಲ್ಲ -ಭಗವಂತ ಅಲ್ಲ , ಭಗವಂತ ಇಲ್ಲ !!! ಅಂದರೆ ಭಗವಂತ ನಮಗೆ ಕಾಣುವ ಯಾವುದೇ ವಸ್ತು ಅಲ್ಲ ಅವನಲ್ಲಿ ದೋಷವಿಲ್ಲ.

## 18 ಯೋಗ

-ಜೀವದ ಜೊತೆಗೆ ನಿರಂತರವಾಗಿ ಇರುವ ಆಪ್ತ ಬಂಧು.

## 19 ಯೋಗವಿದಾಂ ನೇತಾ

-ಸರ್ವ ವೇದ ಮಂತ್ರಗಳನ್ನು ಬಲ್ಲವನಿಗೆ ನಾಯಕ. ಅಂದರೆ ಬ್ರಹ್ಮಾದಿ ದೇವತೆಗಳ ನಾಯಕ

## 20 ಪ್ರಧಾನಪುರುಷೇಶ್ವರಃ

- ಪ್ರಧಾನ ಅಂದರೆ "ಶ್ರೀ " ಅಂದರೆ ಲಕ್ಷ್ಮಿ => ಲಕ್ಷ್ಮಿಗೂ ಈಶ್ವರ ,ಬ್ರಹ್ಮ ವಾಯುರಿಗೂ ಈಶ್ವರ

ನಾರಸಿಂಹವಪುಃ

೧. ನರ ಮತ್ತು ಸಿಂಹ ರೂಪದಲ್ಲಿ ಕಂಬದಿಂದ ಉದ್ಭವಿಸಿ ಹಿರಣ್ಯಕಶಿಪುವಿನ ಸಂಹಾರ ಮಾಡಿದ ಭಗವಂತನ ರೂಪ ಎನ್ನುವುದು ಮೇಲ್ನೋಟಕ್ಕೆ ಕಾಣುವ ಅರ್ಥ, ಆದರೆ ನಾರಸಿಂಹವಪುಃ ಅನ್ನುವುದಕ್ಕೆ ವಿಶಿಷ್ಟವಾದ ಇತರ ಅರ್ಥವಿದೆ. ನಾರ+ ಸಿಂಹ; ನಾರ ಅಂದರೆ->ನರರಲ್ಲಿ ತುಂಬಿರುವ ಅಜ್ಞಾನ. ಸಿಂಹ ಅಂದರೆ ->ಸಿಮ್ಮೃತಿ, ಅಂದರೆ ನಿವಾರಿಸುವವನು, ವ- ಅಂದರೆ ಜ್ಞಾನ; ,ಪುಃ ಅಂದರೆ ->ಕರುಣಿಸುವವನು

೨.ನಾರಸಿಂಹವಪುಃ ಅಂದರೆ ನರರಲ್ಲಿ ತುಂಬಿರುವ ಅಜ್ಞಾನವನ್ನು ಅಳಿಸಿ ಜ್ಞಾನದ ಬೀಜ ಬಿತ್ತುವವನು ನಾ+ಅರ =ನಾರ ; ಅರ ಅಂದರೆ ದೋಷ ;ನಾರ ಅಂದರೆ ಯಾವುದೇ ದೋಷವಿಲ್ಲದವನು ;ಸಿಂಹ ಅಂದರೆ-ಭಯಂಕರವಾಗಿ ಸರ್ವ ದೋಷವನ್ನು ನಾಶಮಾಡುವವನು.

೩.ನಾರಸಿಂಹವಪುಃ ಅಂದರೆ ಸರ್ವ ದೋಷವನ್ನು ಭಯಂಕರವಾಗಿ ನಾಶಮಾಡಿಯೂ ಕೂಡ, ಯಾವುದೇ ದೋಷವಿಲ್ಲದಿರುವವನು

೪. ಪ್ರಳಯ ಕಾಲದಲ್ಲಿ ನರವಂಶವನ್ನು ನಾಶಮಾಡಿ, ಸೃಷ್ಟಿಕಾಲದಲ್ಲಿ ಪುನಃ ಬೀಜ ಬಿತ್ತಿ ಸೃಷ್ಟಿಮಾಡುವವನು. ಹೀಗೆ ಮನುಕುಲದ ಸೃಷ್ಟಿ-ಸಂಹಾರಕ್ಕೆ ಕಾರಣವಾದವನು ನಾರಸಿಂಹವಪುಃ

೫. ಅಸುರರನ್ನು ಕೊಂದವ ನಾರಸಿಂಹವಪುಃ

## ಶ್ರೀಮಾನ್

-ಭಗವಂತ ಶ್ರೀಮಂತ ! ; ೧> ಇಡೀ ವಿಶ್ವದ ಒಡೆತನ ಇರುವವನು ಅದ್ದರಿಂದ ಆತ ಶ್ರೀಮಾನ್.
-ಶ್ರೀಹಿ ಅಂದರೆ ವೇದ ವಾಙ್ಮಯ; ೨> ಶ್ರೀಮಾನ್ ಅಂದರೆ ಸಮಸ್ತ ವೇದದಿಂದ ಪ್ರತಿಪಾದ್ಯನಾದವನು.
-ಶ್ರೀ ಅಂದರೆ "ಲಕ್ಷ್ಮಿ" - ೩> ಶ್ರೀಮಾನ್ ಅಂದರೆ ಲಕ್ಷ್ಮೀಪತಿಯದ ಭಗವಂತ.
-ಐತರೇಯ ಉಪನಿಷದ್ ನಲ್ಲಿ ಹೇಳುವಂತೆ "ಕಣ್ಣು ಒಂದು ಶ್ರೀ , ಮನಸ್ಸು ಒಂದು ಶ್ರೀ , ಕಿವಿ ಒಂದು ಶ್ರೀ, ಮಾತು ಒಂದು ಶ್ರೀ ಮತ್ತು ಉಸಿರು ಒಂದು ಶ್ರೀ " ಏಕೆಂದರೆ ಈ ಪಂಚೇಂದ್ರಿಯಗಳು ಶಿರಸ್ಸನ್ನು ಆಶ್ರಯಿಸಿಕೊಂಡಿರುವ ಇಂದ್ರಿಯಗಳು ಅದ್ದರಿಂದ "ಶ್ರೀ" .

ಮನುಷ್ಯ ಅರಿವಿನ ಸಂಪತ್ತನ್ನು ಗಳಿಸುವುದೇ ಕಣ್ಣು- ಕಿವಿಯಿಂದ ; ಕಣ್ಣು-ಕಿವಿ ದೇಹದ ಸೂರ್ಯ-ಚಂದ್ರ ಇದ್ದಂತೆ. ಅಗ್ನಿ ಸ್ವರೂಪವಾಗಿರುವ ಬಾಯಿ (ಮಾತು)- ಮನುಷ್ಯನಿಗೆ ಭಗವಂತ ಕೊಟ್ಟಿರುವ ಅಪೂರ್ವವಾದ ಸಂಪತ್ತು. ಮಾತು ಹೊರಡಬೇಕಿದ್ದರೆ, ನೋಡಿದ್ದನ್ನ ಅನುಭವಿಸಲಿಕ್ಕೆ , ಕೇಳಿದ್ದನ್ನ ಗ್ರಹಿಸಲು ಅತ್ಯಂತ ಮುಖ್ಯವಾಗಿ ಮನಸ್ಸು ಬೇಕು. ಈ ಎಲ್ಲಾ ಇಂದ್ರಿಯಗಳನ್ನೂ ಚಾಲನೆಯಲ್ಲಿಡಲು ಪ್ರಾಣಶಕ್ತಿ ಬೇಕು. ಅದ್ದರಿಂದ ಈ ಪಂಚೇಂದ್ರಿಯಗಳು ಮನುಷ್ಯನಲ್ಲಿರುವ ಅತ್ಯಂತ ಶ್ರೀಮಂತ ಅಂಗ .೪> ಶ್ರೀಮಾನ್ ಅಂದರೆ -ಈ ಪಂಚೇಂದ್ರಿಯಗಳನ್ನು ನಮಗೆ ದಯಪಾಲಿಸಿದ ಹಾಗು, ಪಂಚೇಂದ್ರಿಯಗಳ ಒಡೆಯನಾದ, ಲಕ್ಷ್ಮೀಪತಿಯದ ಆ ಕರುಣಾಮಯೀ ಭಗವಂತ.

## ಕೇಶವ

ಕೇಶವ ಅಂದರೆ :-ಅತ್ಯಂತ ಸುಂದರವಾದ ಕೂದಲು ಉಳ್ಳವನು ಎಂದರ್ಥ. ಇದು ಭಗವಂತನ ಕೃಷ್ಣಾವತಾರದಲ್ಲಿ ಬಂದ ಹೆಸರು. ಕೃಷ್ಣಾವತಾರದಲ್ಲಿ ಕೃಷ್ಣ ತನ್ನ ಸುಂದರವಾದ ಗುಂಗುರು ಕೂದಲಿನ ಸೌಂದರ್ಯದಿಂದ ಎಲ್ಲರನ್ನು ಆಕರ್ಷಿಸುತ್ತಿದ್ದ. ಗಂಡಸರು , ಹೆಂಗಸರು , ಗೋವುಗಳು ಎಲ್ಲರೂ ಕೃಷ್ಣನಿಂದ ಆಕರ್ಷಣೆಗೆ ಒಳಗಾಗುತ್ತಿದ್ದರು .

-ಕೇಶದಿಂದ ಬಂದವ ಕೇಶವ (ಕೃಷ್ಣಾವತಾರ )

-ಕೇಶಿಯನ್ನು ಕೊಂದವ ಕೇಶವ (ಕೇಶಿ ಕಂಸನ ಧೂತ - ಕೃಷ್ಣನನ್ನು ಕೊಲ್ಲಲು ಕಂಸ ಕೇಶಿಯನ್ನು , ಕುದುರೆ ರೂಪದಲ್ಲಿ ಬೃಂದಾವನಕ್ಕೆ ಕಳುಹಿಸಿಕೊಟ್ಟಿದ್ದ . ಆತನನ್ನು ಕೃಷ್ಣ ಸಂಹಾರ ಮಾಡಿದ್ದ).

-ಕೇಶಿ ಎನ್ನುವ ಧೂತನನ್ನು ಹೊಂದಿದವನನ್ನು (ಕಂಸನನ್ನು) ಕೊಂದವ ಕೇಶವ.

- ಕಾ+ಈಶ+ವ =>ಕಾ ಎಂದರೆ ಸೃಷ್ಟಿಗೆ ಕಾರಣವಾಗಿರುವ ಚತುರ್ಮುಖ ಬ್ರಹ್ಮ ; ಈಶ ಎಂದರೆ ಸಂಹಾರಕ್ಕೆ ಕಾರಣವಾಗಿರುವ ಶಂಕರ; ಕೇಶವ ಅಂದರೆ ಸೃಷ್ಟಿ-ಸಂಹಾರಕ್ಕೆ ಕಾರಣವಾಗಿರುವ ಬ್ರಹ್ಮಶಕ್ತಿ ಮತ್ತು ಶಿವಶಕ್ತಿಯನ್ನು ನಿಯಂತ್ರಿಸುವ ಪರಶಕ್ತಿ.

ಕೇಶ ಅಂದರೆ ಸೂರ್ಯಮಂಡಲದಿಂದ ಭೂಮಿಗೆ ಹರಿದುಬರುವ ಕಿರಣ;

-ಸೌರ ಮಂಡಲದಲ್ಲಿ ನಿಂತು , ಸೌರ ಶಕ್ತಿಯಿಂದ ಈ ಜಗತ್ತನ್ನು ಬೆಳಗಿಸುವ , ಗಾಯತ್ರಿ ಸ್ವರೂಪ ಭಗವಂತ-ಕೇಶವ.

-ಕೇಶವ ಅಂದರೆ ನೀರಿನಲ್ಲಿ ಚಲಿಸುವ ಭಗವಂತ

-ಜ್ಞಾನಾನಂದಗಳ ಒಡೆಯ ಕೇಶವ

## 24 >ಪುರುಷೋತ್ತಮಃ

ಪುರುಷೋತ್ತಮ ಎನ್ನುವ ನಾಮದ ಅರ್ಥವನ್ನು ಭಗವದ್ಗೀತೆಯಲ್ಲಿ ಕಾಣಬಹುದು.
ಪುರುಷೋತ್ತಮ ಎನ್ನುವ ನಾಮವನ್ನು ಮೂರು-ನಾಲ್ಕು ಬಗೆಯಿಂದ ಪ್ರಯೋಗಿಸುತ್ತಾರೆ.
ಉತ್ತಮ ಪುರುಷ ; ಮಹಾ ಪುರುಷ ; ಪರಮ ಪುರುಷ ,ಪುರುಷೋತ್ತಮ -ಎಲ್ಲವೂ ಸುಮಾರಾಗಿ ಒಂದೇ ಅರ್ಥವನ್ನು ಕೊಡುತ್ತವೆ.

ಉತ್ತಮ ಪುರುಷ ಅಂದರೆ-ಪುರುಷರಲ್ಲಿ ಉತ್ತಮ.
ಕ್ಷರ ಪುರುಷ->ಅಕ್ಷರ ಪುರುಷ→ಪುರುಷೋತ್ತಮ

ಕ್ಷರ ಪುರುಷ ಅಂದರೆ- ಕ್ಷರವಾದ ಪುರದಲ್ಲಿ ಇರುವ ಎಲ್ಲಾ ಜೀವರು (ನಾಶವಾಗುವ ಶರೀರ ಉಳ್ಳವರು).

ಹದಿನೈದು ಬೇಲಿಯಿಂದ ಬದ್ಧನಾದ ಶರೀರದಲ್ಲಿರುವ ಜೀವ->ಕ್ಷರ-ಪುರುಷ.
ಹದಿನೈದು ಬೇಲಿ:

1 >ಶ್ರದ್ಧೆಯ ಬೇಲಿ: ಇದರಲ್ಲಿ ಎರಡು ವಿಧ

೧) ಜೀವ ಸ್ವರೂಪಭೂತವಾದ ಬೇಲಿ (ಕಿತ್ತೆಸೆಯಲು ಆಗದ ಬೇಲಿ)- ಜೀವ ಸ್ವಭಾವ ಶ್ರದ್ಧೆ

೨)ಕಿತ್ತೆಸೆಯಬೇಕಾದ ಬೇಲಿ-ಮನೆತನ , ಕುಟುಂಬ , ಬೆಳೆದ ವಾತಾವರಣದ ಪ್ರಭಾವದಿಂದ ಬಂದ ಶ್ರದ್ಧೆ. ಪರಿಸರದ ಪ್ರಭಾವ, ಮನೆತನದ ಅನುವಂಷಿಕ (ಜೀನ್ಸ್) ಪ್ರಭಾವದಿಂದ ಬಂದ ಶ್ರದ್ಧೆ ಯನ್ನು ಮೀರಿನಿಂತು ನೋಡಿದಾಗ ಮಾತ್ರ ನಿಜವಾದ ಶ್ರದ್ಧೆ ಅಂದರೆ ಏನು ಅಂತ ಅರ್ಥವಾಗುತ್ತದೆ.

**2 -6 > ಪಂಚಭೂತಗಳ ಬೇಲಿ : ಮಣ್ಣು-ನೀರು( ಅನ್ನಮಯ ಕೋಶ) ಬೆಂಕಿ-ಗಾಳಿ-ಆಕಾಶ(ಪ್ರಾಣಮಯ ಕೋಶ)**

**7 > ಇಂದ್ರಿಯಗಳ ಬೇಲಿ: ಐದು ಜ್ಞಾನೇಂದ್ರಿಯಗಳು ಐದು ಕರ್ಮೇಂದ್ರಿಯಗಳು (ಕೆಟ್ಟದ್ದನ್ನು ಮಾಡುವ ).**

**8 > ಅಂತಃಕರಣದ ಬೇಲಿ: ಮನಸ್ಸು (ಕೆಟ್ಟದ್ದನ್ನು ಯೋಚಿಸುವ)**
**9 > ಅನ್ನದ ಬೇಲಿ: ಆಹಾರ**

**10 > ವೀರ್ಯದ ಬೇಲಿ: ಶಕ್ತಿ**

**11-13 > ತಪಃ - ಮಂತ್ರಹ: - ಕರ್ಮಃ**

೧>ಹಾಗಾಗಬೇಕು ಹೀಗಾಗಬೇಕು ಅನ್ನುವ ಆಲೋಚನೆ (ತಿರುಕನ ಕನಸಿನಂತೆ)-ತಪಃ .

೨>ತನ್ನ ಕನಸನ್ನು ನನಸು ಮಾಡಲು ಆಡುವ ಮಾತುಗಾರಿಕೆ - ಮಂತ್ರಹ: .

೩>ಮತ್ತು ಅದನ್ನು ಸಾಧಿಸಲು ಮಾಡುವ ಕರ್ಮ - ಕರ್ಮಃ .

**14 > ಲೋಕಗಳು : ಸ್ತಿರ-ಚರ ಸೊತ್ತುಗಳು (ನಾನು ಮಾಡಿದ್ದು , ನನ್ನದು ಅನ್ನುವ ಸೊತ್ತುಗಳು)**

**15 > ನಾಮದ ಬೇಲಿ : ಕೀರ್ತಿ.**

ಈ ಮೇಲಿನ ನಾಶವಾಗತಕ್ಕಂತಹ ಹದಿನೈದು ಬೇಲಿ ಒಳಗೆ ಸಿಕ್ಕಿ ಹಾಕಿಕೊಂಡಿರುವುದೇ ಹದಿನಾರನೇ ಜೀವ

**(16) . ಜೀವಿಗೆ ಈ ಮೇಲಿನ ಬೇಲಿ ಎನ್ನುವ ಅಂಗಿ ಹಾಕಿ ಈ ಪ್ರಪಂಚಕ್ಕೆ ಕಳಿಸಿರುವ ಚಿತ್ ಪ್ರಕೃತಿ**

**(17)- ಲಕ್ಷ್ಮಿ-ಅಕ್ಷರಪುರುಷಳು. ಈ ಮೇಲಿನ ಕ್ಷರ-ಅಕ್ಷರಗಳಿಗಿಂತ ಅತೀತನಾದ , ಸಮತೀತ ಕ್ಷರಅಕ್ಷರನಾದ ಭಗವಂತ ಪುರುಷೋತ್ತಮ**

**(18). ಮೇಲಿನ ಬೇಲಿಯಿಂದ ಜೀವಿಯನ್ನು ಬಿಡಿಸಿ ಮುಕ್ತಿಯನ್ನು ಕರುಣಿಸುವವನು ಪುರುಷೋತ್ತಮ!**

## 25>ಸರ್ವಃ

ವಿಶ್ವಂ ಮತ್ತು ಸರ್ವ- ಸಮಾನಾರ್ಥಕವಾದ ನಾಮಗಳು .
ಭಗವಂತ ಸರ್ವ ಅಂದರೆ -ಸರ್ವಸಮರ್ಥ ;ಸರ್ವಗತ ; ಸರ್ವಗುಣ ಪೂರ್ಣ.

ಸರ್ವ ಅಂದರೆ ಎಲ್ಲವನ್ನು ತಿಳಿದವನು , ಎಲ್ಲೆಡೆ ತುಂಬಿರುವವನು ,ಎಲ್ಲಾ ಕಾಲದಲ್ಲೂ ಇರುವವನು , ಎಲ್ಲಕ್ಕೂ ಕಾರಣನಾದವನು, ಪರಿಪೂರ್ಣನಾದವನು.

## 26> ಶರ್ವಃ

ಶರ್ವ ಅಂದರೆ ಸಮಸ್ತ ಜಗತ್ತನ್ನು ಸಂಹಾರ ಮಾಡುವವನು (ಆದ್ದರಿಂದ ಸಂಹಾರ ಶಕ್ತಿ- ಶಿವನನ್ನೂ ಶರ್ವ ಎಂದು ಕರೆಯುತ್ತಾರೆ) .
ಶರ್ವ ಅಂದರೆ ದುರ್ಜನರಿಗೆ, ಪಾಪಿಗಳಿಗೆ ದುಃಖವನ್ನು ಕೊಡುವವನು!

## 27> ಶಿವಃ

ಶ ಅಂದರೆ ಸುಖ ; ಶಿವ ಅಂದರೆ ಜ್ಞಾನಾನಂದ ಸ್ವರೂಪ, ಪರಮಮಂಗಳ ಸ್ವರೂಪ.

## 28 >ಸ್ಥಾಣು

ಸ್ಥಾಣು ಅಂದರೆ ಚಲಿಸದ. ಭಗವಂತ ಸರ್ವಗತ ಅದ್ದರಿಂದ ಆತ ಸ್ಥಾಣು.
ಆತ ಚಲಿಸದೆ ಮಲಗಿದ್ದರೂ, ಎಲ್ಲಾ ಕಡೆ ತಲುಪಬಲ್ಲ. ಏಕೆಂದರೆ ಬಿಂಬ ರೂಪವಾಗಿ ಪ್ರತಿಯೊಂದರಲ್ಲೂ ಭಗವಂತ ಇದ್ದಾನೆ. ಆತ ಆಕಾಶಕ್ಕಿಂತ ದೊಡ್ಡವ , ಪರಮಾಣುಗಿಂತ ಚಿಕ್ಕವ ಚಲಿಸಿದಂತೆ ಕಾಣುವ ಚಲಿಸದೆ ಇರುವ ಸ್ವರೂಪ.

## 29)ಭೂತಾದಿ (ಸ್ಥಾಣುರ್ಭೂತಾದಿ)

ಭೂತಾದಿ ಅಂದರೆ ಎಲ್ಲಾ ಭೂತಗಳ ಆದಿ. ಎಲ್ಲಾ ಜೀವಗಳ, ಎಲ್ಲಾ ಜಡಗಳ ಆದಿ.
ಎಲ್ಲಾ ಚರಾಚರಾತ್ಮಕವಾದ, ಚೇತನಾಚೇತನಾತ್ಮಕವಾದ ಪ್ರಪಂಚಕ್ಕೆ ಆದಿ ಕಾರಣನಾದವ ಭೂತದಿ. ಅಷ್ಟೇ ಅಲ್ಲ ಈ ಎಲ್ಲಾ ಭೂತಗಳನ್ನ ತನ್ನಲ್ಲಿರಿಸಿಕೊಂಡು ಪಾಲನೆ ಮಾಡುವವನು,ಕೊನೆಗೆ ಸಂಹಾರ ಮಾಡುವವನು. ಆದ್ದರಿಂದ ಸಮಸ್ತ ಚರಾಚರಾತ್ಮಕವಾದ, ಚೇತನಾಚೇತನಾತ್ಮಕವಾದ ಪ್ರಪಂಚದ ಸೃಷ್ಟಿ- ಸ್ತಿತಿ- ಸಂಹಾರಕ್ಕೆ ಕಾರಣನಾದವನು ಭೂತಾದಿ. ಭೂತರು ಅಂದರೆ ಮುಕ್ತರು ಮುಕ್ತರಿಗೆ ಮುಕ್ತಿಯನ್ನು ಕರುಣಿಸುವವನು ಭೂತಾದಿ.

## 30)ನಿಧಿರವ್ಯಯ

ಸ್ಥಾಣುರ್ಭೂತಾದಿರ್ನಿಧಿರವ್ಯಯಃ (ನಿಧಿರವ್ಯಯ) ನಿಧಿ+ಅವ್ಯಯಃ -> ನಿಧಿರವ್ಯಯ

ನಿಧಿ ಅಂದರೆ ಕೊಪ್ಪರಿಗೆ (ಹೂತಿಟ್ಟ ಸಂಪತ್ತು), ಭಗವಂತನ ಅರಿವೇ ಅತೀ ದೊಡ್ಡ ಕರಗದ-ಅಳಿಯದ (ಅವ್ಯಯ) ಸಂಪತ್ತು. ನಿಗೂಢವಾದ ಹೃದಯ ಗುಹೆಯೊಳಗೆ ಅಡಗಿರುವ (ಹೃತ್ಕಮಲ ಮದ್ಯ ನಿವಾಸಿ). ಅಪೂರ್ವ, ಅಮೂಲ್ಯವಾದ ನಿಧಿ.

ಅವನು ಅವಿ ಅಂದರೆ - ಅವತಿ ಅಂದರೆ ರಕ್ಷಕ. ಹೃದಯ ಗುಹೆಯಲ್ಲಿ ಅಡಗಿದ್ದು, ನಮ್ಮ ನಿರಂತರ ರಕ್ಷಣೆ ಮಾಡುವವನು; ಅಯಃ ಅಂದರೆ ಎಲ್ಲಾ ಕಡೆ ಇರುವವನು; ನಮ್ಮ ಕ್ಷೇಮಕ್ಕೋಸ್ಕರ, ನಮ್ಮ ರಕ್ಷಣೆಗೋಸ್ಕರ, ನಮ್ಮಲ್ಲಿ ಅಡಗಿ ಕುಳಿತಿರುವ, ಹಾಗು ಎಲ್ಲಾ ಕಡೆ ಇರುವ ಅಪೂರ್ವ ನಿಧಿ- ನಿಧಿರವ್ಯಯ.

## 31 )ಸಂಭವೋ

ಸಂಭವಃ ಅಂದರೆ ಭಕ್ತರು ಕರೆದಾಗ ತಾನೇ ತಾನಾಗಿ ಸಂಭವಿಸುವವನು (ಭೂಮಿಗೆ ಇಳಿದು ಬರುವವನು). ಜಗತ್ತಿನ ಸೃಷ್ಟಿಗೆ ಕಾರಣನಾದವನು ಹಾಗು ಜಗತ್ತಿನ ಪಾಲನೆಗೊಸ್ಕರ ತಾನೇ ತಾನಾಗಿ ಅವತರಿಸುವವನು. ಸಮೀಚೀನಃ ಭವಃ - ಶ್ರೇಷ್ಠವಾದ ಉನ್ನತಿ-ಮುಕ್ತಿ ಯಾರಿಂದ ಸಿಗುತ್ತದೋ ಅವನು ಸಂಭವ

## 32 )ಭಾವನೋ

ಭಾವನ್-ನಯತೀತಿ- ಭಾವನಃ ಒಬ್ಬೊಬ್ಬರೊಳಗಿದ್ದು ಅವರ ಭಾವನೆಗಳನ್ನು ನಿಯಂತ್ರಿಸುವ ಶಕ್ತಿ ಭಾವನಃ ಭಾವಂ+ನಯತಿ-ಭಾವನಃ (ಆನಂದ);ಭಾವಂ+ಅಪನಯತಿ-ಭಾವನಃ(ದುಃಖ) - ನಮ್ಮ ಸುಖ-ದುಃಖಕ್ಕೆ ಕಾರಣನಾದವನು ಭಾವನಃ .

## 33 )ಭರ್ತಾ

ಭರ್ತಾ ಅಂದರೆ ಎಲ್ಲವನ್ನೂ ಹೊತ್ತವನು. ಇಡೀ ವಿಶ್ವವನ್ನು ಧರಿಸಿದವನು.

## 34 )ಪ್ರಭವಃ

ಪ್ರ - ಎಲ್ಲಕ್ಕಿಂತ ಪ್ರಕೃಷ್ಟನಾಗಿರುವ ಭಗವಂತ; ವಿ-ಎಲ್ಲಕ್ಕಿಂತ ವಿಶಿಷ್ಟನಾಗಿರುವ ಭಗವಂತ ; ಯಃ- ಜ್ಞಾನ ಸ್ವರೂಪನಾದ ಭಗವಂತ . ಯಾರು ಎಲ್ಲಕ್ಕಿಂತ ದೊಡ್ಡವನೂ, ಯಾರಿಂದ ಎಲ್ಲರೂ ಎತ್ತರಕ್ಕೆ ಏರಲು ಸಾಧ್ಯವೂ ಅವನು ಪ್ರಭವಃ .

## 35-36 )ಪ್ರಭುರೀಶ್ವರಃ

ಭಗವಂತ ಎಲ್ಲರ ಪ್ರಭು. ಈಶರು-ಅಂದರೆ ನಮ್ಮ ದೇಹ ಹಾಗು ಪ್ರಪಂಚಕ್ಕೆ ಸಂಬದ್ದಪಟ್ಟ ಅಭಿಮಾನಿ ದೇವತೆಗಳು. ಉದಾಹರಣೆಗೆ: ಶನಿ-ಪೃಥ್ವಿಯ ಅಭಿಮಾನಿ ದೇವತೆ; ಬುಧ-ನೀರಿನ ಅಭಿಮಾನಿ ದೇವತೆ; ಗಣಪತಿ-ಆಕಾಶದ ಅಭಿಮಾನಿ ದೇವತೆ; ಸೂರ್ಯ- ಕಣ್ಣಿನ ಅಭಿಮಾನಿ ದೇವತೆ; ಚಂದ್ರ- ಕಿವಿಯ ಅಭಿಮಾನಿ ದೇವತೆ; ವರುಣ-ನಾಲಗೆಯ ಅಭಿಮಾನಿ ದೇವತೆ; ಅಗ್ನಿ-ಮಾತಿನ ಅಭಿಮಾನಿ ದೇವತೆ; ಇಂದ್ರ-ಕೈಯ ಅಭಿಮಾನಿ ದೇವತೆ; ಯಜ್ಞ- ಕಾಲಿನ ಅಭಿಮಾನಿ ದೇವತೆ; ಅನಿರುದ್ಧ , ಬೃಹಸ್ಪತಿ , ವರುಣ , ಮಿತ್ರ , ಇಂದ್ರ , ಕಾಮ , ಗರುಡ , ಶೇಷ , ರುದ್ರ , ವಾಯು - ಮನಸ್ಸಿನ ಅಭಿಮಾನಿ ದೇವತೆಗಳು ;

ಶ್ರದ್ಧೆಯ ದೇವತೆ- ಸರಸ್ವತಿ ; ಹೀಗೆ ಬೇರೆ ಬೇರೆ ದೇವತೆಗಳ ಸಮುದಾಯವಿದೆ. ಈ ದೇವತೆಗಳ ಸಮೂಹ ನಮ್ಮ ದೇಹದಲ್ಲಿರುವ ಹದಿನೈದು ಬೇಲಿಗಳನ್ನು ನಿಯಂತ್ರಿಸುವ ಈಶರು. ಈ ಎಲ್ಲಾ ದೇವತೆಗಳು ಅಖಂಡವಾದ ಭಗವಂತನ ನೀತಿಗೆ ಬದ್ಧರಾಗಿ ಕೆಲಸ ಮಾಡುತ್ತಿರುತ್ತಾರೆ. ಈ ಎಲ್ಲಾ ಈಶರಿಗೂ ವರನಾದವ, ಶ್ರೇಷ್ಠನಾದವ , ಈ ದೇಹದಲ್ಲಿರುವ ಸರ್ವ-ನಿಯಾಮಕನಾದ ಭಗವಂತ ಈಶ್ವರ-ಪ್ರಭುರೀಶ್ವರ.

## ಸ್ವಯಂಭೂಃ

ಸ್ವಯಂಭೂಃ ಅಂದರೆ ತಾನೇ ತಾನಾಗಿ ಪೂರ್ಣವಾಗಿರುವವನು, ತನ್ನಿಂದ ತಾನೆ ಆವಿರ್ಭೂಥನಾಗುವವನು. ನಮ್ಮ ಪೂರ್ಣತೆ ಇನ್ನೊಬ್ಬರು ಕೊಟ್ಟರೆ ಮಾತ್ರ, ಆದರೆ ಭಗವಂತ ಸ್ವಯಂಪೂರ್ಣ. ಭಗವಂತ ಅವತರಿಸಲು ಯಾರು ಕಾರಣ ?

ಅವನು ಹುಟ್ಟಿಬರುವುದಕ್ಕೆ ಯಾರೂ ಕಾರಣರಲ್ಲ , ಆತನು ಸ್ವಯಂಭೂಃ , ಅಂದರೆ ತಾನೇ ತಾನಾಗಿ ಹುಟ್ಟಿ ಬರುವವನು. ಭಕ್ತರ ಬಯಕೆ ಈಡೇರಿಸಲು ಸ್ವಯಂಇಚ್ಛೆಯಿಂದ ಅವತರಿಸಿ ಬರುತ್ತಾನೆ. ಭಗವಂತ ಜ್ಞಾನದಿಂದ-ಜ್ಞಾನದಂತೆ,ದೀಪದಿಂದ-ದೀಪದಂತೆ. ಒಂದು ದೀಪದಿಂದ ಇನ್ನೊಂದು ದೀಪ ಹಚ್ಚಿದರೆ ಮೂಲ ದೀಪದ ಪ್ರಕಾಶ ಕಡಿಮೆ ಆಗುವದಿಲ್ಲ .ಭಗವಂತ ಒಂದು ರೂಪದಿಂದ ಇನ್ನೊಂದು ರೂಪಕ್ಕೆ ಅಭಿವ್ಯಕ್ತ ಆಗುತ್ತಾ ಹೋಗುತ್ತಾನೆ, ಆದರೆ ಮೂಲವೂ ಪೂರ್ಣ , ಮೂಲದಿಂದ ಬಂದ ಅವತಾರವೂ ಪೂರ್ಣ. ಭಗವಂತ ಅವತಾರಕ್ಕೆ ಮೊದಲೂ ಪೂರ್ಣ, ಅವತಾರದಲ್ಲೂ ಪೂರ್ಣ, ಅವತಾರದ ನಂತರ ಮತ್ತೆ ಹೋಗಿ ಪೂರ್ಣತೆಯಲ್ಲೇ ಉಳಿಯುವವನು. ಅದ್ದರಿಂದ ಆತ ಸ್ವಯಂಭೂಃ !

### 38)ಶಂಭುಃ

ಶಂ-ಭವತಿ ->ಆನಂದ ರೂಪ,ಶಂ-ಭವತಿ ಅನೇನ ->ಆನಂದ ಕೊಡುವವನು.

(ಶಂ-ಅಂದರೆ ಆನಂದ - ಉದಾಹರಣೆಗೆ : ಹರಿಃ ಓಮ್ ಶಂ ನೋ ಮಿತ್ರಃ ಶಂ ವರುಣಃ ಶಂ ನೋ ಭವತ್ವರ್ಯಮಾ ಶಂ ನ ಇಂದ್ರೋ ಬೃಹಸ್ಪತಿಃ ಶಂ ನೋ ವಿಷ್ಣುರುರುಕ್ರಮಃ)

ಯಾರು ಸ್ವಯಂ ಆನಂದಮಯನೋ , ಯಾರು ಎಲ್ಲರಿಗೂ ಆನಂದವನ್ನು ಕೊಡಬಲ್ಲನೂ ಅವನು ಶಂಭು.ಎಲ್ಲಾ ಶಾಸ್ತ್ರಗಳು ಭಗವಂತನನ್ನು ಆನಂದಮಯನೆಂದು ಹೇಳುತ್ತವೆ. ಆದ್ದರಿಂದ ಭಗವಂತ ಶಂಭು.

## 39)ಆದಿತ್ಯಃ

ಆದಿತ್ಯ ಅಂದರೆ ಅದಿತಿಯ ಮಗ ಎಂಬುದು ಒಂದು ಅರ್ಥ.
ಅದಿತಿ ಕಶ್ಯಪ ಮಹರ್ಷಿಯ ಹೆಂಡತಿ ಹಾಗು ದೇವತೆಗಳ ತಾಯಿ. ಅದಿತಿಗೆ ಹನ್ನೆರಡು ಮಂದಿ ಮಕ್ಕಳು ಹಾಗು ಅವರನ್ನು ದ್ವಾದಶಾದಿತ್ಯರು ಎಂದು ಕರೆಯುತ್ತಾರೆ - ವಿವಸ್ವಾನ್ ,ಆರ್ಯಮಾನ್ ,ಪೂಷನ್ ,ತ್ವಷ್ಟೃ , ಸವಿತೃ , ಭಗ ,ಧಾತ, ವಿದಾತ, ವರುಣ , ಮಿತ್ರ ,ಶಕ್ರ, ಉರುಕ್ರಮ -ಇವರೇ ಆ ಹನ್ನೆರಡು ಮಂದಿ ಆದಿತ್ಯರು ಈ ಹನ್ನೆರಡು ದೇವತೆಗಳೇ ವರ್ಷದ ಹನ್ನೆರಡು ಮಾಸದ ದೇವತೆಗಳು. ಇವರಲ್ಲಿ ಒಬ್ಬ ಸೂರ್ಯ ,ಒಬ್ಬ ವರುಣ , ಮತ್ತೊಬ್ಬ ಮಿತ್ರ ,ಮತ್ತೊಬ್ಬ ಇಂದ್ರ , ಹಾಗೇ ಕೊನೇ ಮಗನೇ ವಿಷ್ಣು -ವಾಮನ ರೂಪಿ ಭಗವಂತ. ಅವನು ಎಲ್ಲರಿಗಿಂತ ಕೊನೆಗೆ ಹುಟ್ಟಿದರೂ, ಆತ ಆದಿಯಲ್ಲಿ ಇದ್ದವನು . ಆದ್ದರಿಂದ ಆತ ಆದಿತ್ಯಃ ಆದಿ+ತಿ+ಯ -ಆದಿಯಲ್ಲಿ ಜ್ಞಾನಾನಂದ ಸ್ವರೂಪನಾಗಿದ್ದವ,ಎಲ್ಲಕ್ಕೂ ಕಾರಣಕರ್ತ. ಸೂರ್ಯ ಮಂಡಲದಲ್ಲಿ (ಆದಿತ್ಯನಲ್ಲಿ) ಸನ್ನಿಹಿತನಾಗಿರುವ ಭಗವಂತ -ಆದಿತ್ಯಃ

## 40)ಪುಷ್ಕರಾಕ್ಷೋ

ಪುಷ್ಕರ ಅಂದರೆ ಕಮಲ, ಅಕ್ಷ ಅಂದರೆ ಕಣ್ಣು.
ಪುಷ್ಕರಾಕ್ಷ ಅಂದರೆ ನೀರನ್ನು ಹೀರುವ ಬಳ್ಳಿಯಲ್ಲಿ ಈಗಷ್ಟೇ ಅರಳಿದ ಕಮಲದಂತೆ ಅರಳುಗಣ್ಣು ಉಳ್ಳವನು. 'ಅರಳುಗಣ್ಣು' ಅಂದರೆ ಆನಂದಮಯ ವ್ಯಕ್ತಿತ್ವ ಎಂದರ್ಥ- ಭಗವಂತ ಅನಂದಮಯಪೂರ್ಣ. ಕಣ್ಣು ಅರಳುವುದು ಆನಂದದ ಜೊತೆಗೆ ಕಾರುಣ್ಯದ ಸಂಕೇತ ಕೂಡ-ಭಗವಂತ ಕಾರುಣ್ಯಮೂರ್ತಿ. ಪುಷ್ಟಿಕರ ನೋಟ ಉಳ್ಳವನು. ಅಂದರೆ ನಮ್ಮನ್ನು ಸದಾ ರಕ್ಷಿಸುವ ಕರುಣಾದೃಷ್ಟಿ ಉಳ್ಳವನು ಎಂಬುವುದು ಇನ್ನೊಂದು ಅರ್ಥ.

ಪುಷ್ಕರ ಅಂದರೆ ವೇದಗಳಲ್ಲಿ ಹೇಳುವಂತೆ ಯಾವುದರಲ್ಲಿ ಇಡೀ ಪ್ರಪಂಚ ಹುದುಗಿದೆಯೋ ಅದು - "ಹುಟ್ಟದವನ ಹೊಕ್ಕುಳಲ್ಲಿ ಹುಟ್ಟಿತ್ತು" ಹೊಕ್ಕುಳಲ್ಲಿ ಹುಟ್ಟಿದ್ದು ತಾವರೆರೂಪದ ಬ್ರಹ್ಮಾಂಡ (ಬ್ರಹ್ಮನ ಮೊಟ್ಟೆ). 14 ಎಸಳುಗಳುಳ್ಳ ತಾವರೆ ಅಂದರೆ ಹದಿನಾಲ್ಕು ಲೋಕಗಳುಳ್ಳ ಬ್ರಹ್ಮಾಂಡ. ಆದ್ದರಿಂದ ಭಗವಂತ ಪುಷ್ಕರದಲ್ಲಿ ತುಂಬಿರುವ ಅಕ್ಷ -ಪುಷ್ಕರಾಕ್ಷ .

## 41 )ಮಹಾಸ್ವನಃ

ಮಹಾ ಅಂದರೆ ಮಹತ್ತಾದ. ಸ್ವನ ಅಂದರೆ ನಾದ. ಎಲ್ಲಕ್ಕಿಂತ ಮಹತ್ತಾದ ನಾದವಾದ ವೇದವನ್ನು ಸೃಷ್ಟಿ ಮಾಡಿದವನು ಮಹಾಸ್ವನ. ಮಹಾ+ಅಸು+ಅನ=ಮಹಾಸ್ವನ. ಅಸು ಅಂದರೆ 'ಇಂದ್ರಿಯ' , ಮಹಾ-ಅಸು ಅಂದರೆ 'ಅತ್ಯಂತ ಮುಖ್ಯ ಇಂದ್ರಿಯ' , ಅನ ಅಂದರೆ 'ಚಲನೆ' ದೇಹದಲ್ಲಿ ಇರುವ ಎಲ್ಲಾ ಇಂದ್ರಿಯಗಳಲ್ಲಿ

ಉಸಿರು (ಪ್ರಾಣ) ಅತ್ಯಂತ ಮುಖ್ಯ ಇಂದ್ರಿಯ. ಅದ್ದರಿಂದ ಅಸುಗಳಲ್ಲಿ ಮಹಾ ಅಸು-ಉಸಿರು (ಮುಖ್ಯಪ್ರಾಣ). ಈ ಮುಖ್ಯಪ್ರಾಣನಿಗೂ ಕೂಡ ಚಲನೆ ಕೊಟ್ಟವನು-ಮಹಾಸ್ವನ.

### 42)ಅನಾದಿನಿಧನಃ

ಆದಿ-ಅಂತ ಇಲ್ಲದವನು , ಹುಟ್ಟು-ಸಾವು ಇಲ್ಲದವನು.

ಪ್ರಾಣ(ಅನ) ನಲ್ಲಿ ಇದ್ದು, ಸೃಷ್ಟಿ-ಸಂಹಾರಕ್ಕೆ ಕಾರಣನಾದವನು - ಅನಾದಿನಿಧನಃ

## ಧಾತಾ

ಧಾತಾ ಅನ್ನುವ ಭಗವಂತನ ನಾಮ ಈ ಕೆಳಗಿನ ಅರ್ಥವನ್ನು ಕೊಡುತ್ತದೆ-

ಅ) ಇಡೀ ಜಗತ್ತನ್ನು ಧಾರಣೆ ಮಾಡುವ ಮತ್ತು ಪೋಷಣೆ ಮಾಡುವ ಶಕ್ತಿ ಉಳ್ಳವನು.

ಆ) ಎಲ್ಲರಿಗೂ ಏನು ಬೇಕೂ ಅದನ್ನು ಕೊಟ್ಟವನು.

ಇ)ಎಲ್ಲಾ ನಾಮವನ್ನು ಧರಿಸಿದವ (ಎಲ್ಲಾ ದೇವತೆಗಳ ಹೆಸರೂ ಅವನ ಹೆಸರು!) ಮತ್ತು ಧಾನ ಮಾಡಿದವನು.

## ವಿಧಾತಾ

ಸಂಸಾರ ಅವಸ್ತೆಯಲ್ಲಿ ಮಾತ್ರ ಅಲ್ಲ -ವಿಶಿಷ್ಟ ಅವಸ್ಥೆಯಲ್ಲಿಯೂ ಭಗವಂತ ಧಾತಾ ಅದ್ದರಿಂದ ಆತ ವಿಧಾತಾ.

## ಧಾತುರುತ್ತಮಃ

ಧಾತುಹು ಎಂದರೆ ಚತುರ್ಮುಖ, ಧಾತುರುತ್ತಮಃ ಅಂದರೆ ಚತುರ್ಮುಖ ಬ್ರಹ್ಮನಿಗಿಂತ ಉತ್ತಮನಾಗಿರುವವನು ಎಂದರ್ಥ. ಆತ ತ್ರಿಧಾತು-ಮೂರನ್ನು ಧರಿಸಿರುವವನು -ಮೂರು ವೇದಗಳನ್ನು, ಮೂರು ಕಾಲ ಮತ್ತು ಮೂರು ಲೋಕವನ್ನು ಧರಿಸಿರುವ ಎಲ್ಲರಿಗಿಂತ ಶ್ರೇಷ್ಠವಾಗಿರುವ ಸರ್ವಾಧಾರನಾದ ಭಗವಂತ.

## ಅಪ್ರಮೇಯೋ

ಅಪ್ರಮೇಯ ಎಂದರೆ ಕೈಗೆಟುಕದ, ನಮ್ಮ ಬುದ್ದಿಯಿಂದ ಅಳೆಯಲು ಅಸಾಧ್ಯವಾದ, ಆದರೂ ತಿಳಿಯಲು ಸಾದ್ಯವಾದವ ಎಂದರ್ಥ ! ಉದಾಹರಣೆಗೆ - ಸಮುದ್ರದ ನೀರು ಸಂಪೂರ್ಣ ನಮ್ಮ ಕೈಗೆಟಕದು. ಆದರೆ ನಮ್ಮಿಂದಾದಷ್ಟು ನಾವು ತಂದು ಮನೆಯಲ್ಲಿ ಶೇಖರಿಸಿಡಬಹುದು ಮತ್ತು ತಿಳಿಯಬಹುದು. ಒಂದು ಚಮಚ

ಸಮುದ್ರದ ನೀರಿನ ರುಚಿ ಉಳಿದ ನೀರಿನ ರುಚಿಗಿಂತ ಬಿನ್ನ ಅಲ್ಲ. ಭಗವಂತ ಕೂಡ ಸಮುದ್ರದ ನೀರಿನಂತೆ ಅದ್ದರಿಂದ ಆತ ಅಪ್ರಮೇಯ!

## 47) ಹೃಷೀಕೇಶಃ

ಭಗವಂತನನ್ನು ಹುಡುಕುತ್ತಾ ಹೋದರೆ, ಆತ ಕ್ಷಿತಿಜದಂತೆ ದೂರ ದೂರ ಹೋಗುತ್ತಾನೆ. ಅದ್ದರಿಂದ ಅವನನ್ನು ಎಲ್ಲೆಲ್ಲೋ ಹುಡುಕುವ ಬದಲು ನಿಂತಲ್ಲೇ ನಿಂತು ನಿನ್ನೊಳಗೆ ಹುಡುಕು. ನಿನ್ನ ಹೃತ್ಕಮಲದಲ್ಲೇ ಅವನಿದ್ದಾನೆ!!! ಹೃಷೀಕಗಳಿಗೆ ಈಶ ಹೃಷೀಕೇಶ-ಹೃಷೀಕ ಅಂದರೆ ಇಂದ್ರಿಯಗಳು. ಆತ ಇಂದ್ರಿಯಗಳ ಸ್ವಾಮಿ. ಆತನನ್ನು ಇಂದ್ರಿಯದಿಂದ ನೋಡದೆ, ಇಂದ್ರಿಯದಲ್ಲಿ ನೋಡು !! ಉಪನಿಷತ್ತಿನಲ್ಲಿ ಹೇಳುವಂತೆ-ನಮಗೆ ಪ್ರತಿಯೊಂದು ಇಂದ್ರಿಯಗಳನ್ನು ದಯಪಾಲಿಸಿ , ಅದರಲ್ಲಿ ನಿಂತು ನೆಡೆಸುವವನು ಹೃಷೀಕಗಳ ಈಶನಾದ ಹೃಷೀಕೇಶ.

ಕೇಶ ಅನ್ನುವ ಶಬ್ದಕ್ಕೆ ಸೂರ್ಯಕಿರಣ ಎಂಬ ಅರ್ಥವನ್ನು "ಕೇಶವ" ಎಂಬಲ್ಲಿ ವಿಶ್ಲೇಷಿಸಿದ್ದೇವೆ. ಸೂರ್ಯನ ಕಿರಣದಲ್ಲಿ ಏಳು ಬಣ್ಣವಿದೆ, ನಮ್ಮ ದೇಹದಲ್ಲಿ ಏಳು ಶಕ್ತಿ ಚಕ್ರಗಳಿವೆ(ಸಹಸ್ರಾರ, ಆಜ್ಞ, ವಿಶುದ್ಧ, ಅನಾಹತ, ಮಣಿಪುರ, ಸ್ವಾಧಿಸ್ಟಾನ ಮತ್ತು ಮೂಲಾಧಾರ. ಅದೇ ರೀತಿ ಅಗ್ನಿಯಲ್ಲಿ ಕೂಡ ಏಳು ಬಣ್ಣವಿದೆ. ನಮ್ಮ ದೇಹದಲ್ಲಿರುವ ಏಳು ಶಕ್ತಿ ಕೇಂದ್ರಗಳಿಂದ ಹೊರಹೊಮ್ಮುವ ಏಳು ಭಾವನೆಗಳನ್ನು ಅಗ್ನಿಯ ಏಳು ಬಣ್ಣಗಳ ಮೂಲಕ ಸೂರ್ಯಕಿರಣದ ಜೊತೆಗೆ ಸಮ್ಮಿಲನ ಮಾಡುವ ಕ್ರೀಯೆಯನ್ನು "ಹೋಮ" ಎನ್ನುತ್ತಾರೆ (ಅದ್ದರಿಂದ ಭಗವಂತನಿಗೆ ಸಲ್ಲಬೇಕಾದ ಯಾವುದೇ ಹೋಮವನ್ನು ರಾತ್ರಿ ಮಾಡುವುದಿಲ್ಲ). ಈ ಎಲ್ಲಾ ಏಳು ವರ್ಣದಲ್ಲಿ ತುಂಬಿ ಬದುಕಿಗೆ ಹರ್ಷವನ್ನು ಕೊಡತಕ್ಕಂತ ಭಗವಂತ-ಹೃಷೀಕೇಶ.

## 48)ಪದ್ಮನಾಭ

ತಾವರೆರೂಪದ ಹದಿನಾಲ್ಕು ಲೋಕಗಳುಳ್ಳ ಈ ಬ್ರಹ್ಮಾಂಡ ಯಾರ ನಾಭಿಯಿಂದ ಸೃಷ್ಟಿಯಾಗಿದೆಯೋ , ಅವನು ಪದ್ಮನಾಭ. ಈ ಸೃಷ್ಟಿಯ ಕಾರಣಪುರುಷ.

## 49)ಅಮರಪ್ರಭುಃ

"ಮರರು" ಅಂದರೆ ಮರಣ ಹೊಂದುವವರು.
"ಅಮರರು" ಅಂದರೆ ಮರಣವಿಲ್ಲದವರು ಎಂದರ್ಥ.
ಮರಣ ಕೇವಲ ಬೌದ್ಧಿಕ ಶರೀರಕ್ಕೆ ಹೊರತು ಸೂಕ್ಷ್ಮ ಶರೀರಕ್ಕಲ್ಲ. ಮುಕ್ತಿ ಪಡೆದ ಎಲ್ಲಾ ಜೀವರು ಅಮರರು. ಬ್ರಹ್ಮಾದಿ-ದೇವತೆಗಳು ಅಮೃತಪಾನದಿಂದ ಅಮರರೆನಿಸಿದ್ದರೂ ಕೂಡ , ಅವರಿಗೂ ಹಲವು ಕಲ್ಪಗಳ ನಂತರ ಮರಣ-ಮೋಕ್ಷವಿದೆ . ಆದರೆ ಬ್ರಹ್ಮಾದಿ-ದೇವತೆಗಳ ಆಯಸ್ಸು ಧೀರ್ಘವಾದ್ದರಿಂದ ಅವರನ್ನು

ಅಮರರು ಎನ್ನುತ್ತಾರೆ. ಇಲ್ಲಿ ಅಮರಪ್ರಭು ಎಂದರೆ- ಮುಕ್ತಿ ಪಡೆದ ಜೀವ ಹಾಗು ಬ್ರಹ್ಮಾದಿ-ದೇವತೆಗಳ ಒಡೆಯ(ಪ್ರಭು) ಎಂದರ್ಥ.

## ವಿಶ್ವಕರ್ಮಾ.

ವಿಶ್ವಕರ್ಮ ಎಂದರೆ ಈ ವಿಶ್ವದ ವಿನ್ಯಾಸಕಾರ ಎಂದರ್ಥ.
ಪ್ರಾಚೀನ ಗ್ರಂಥಗಳಲ್ಲಿ ಈ ವಿಶ್ವವನ್ನು ಐವತ್ತೈದು ಅವಯವಗಳಿರುವ ,ಹಾಗು ಪ್ರವೃತ್ತಿ ಮತ್ತು ನಿವೃತ್ತಿ ಎಂಬ ಎರಡು ಹಣ್ಣುಗಳಿರುವ ಒಂದು ಮರವನ್ನಾಗಿ ವರ್ಣಿಸಿದ್ದಾರೆ.
ಇಲ್ಲಿ ಪ್ರವೃತ್ತಿ ಎಂದರೆ ನಮಗೆ ಬೆನ್ನು ಹಾಕಿ ನಿಂತಿರುವ ಬೌದ್ಧಿಕ ಸುಖದ ಬೆನ್ನು ಹತ್ತುವ ಕರ್ಮ ಜೀವಿ, ಹಾಗು ನಿವೃತ್ತಿ ಎಂದರೆ ಬೌದ್ಧಿಕ ಸುಖಕ್ಕೆ ಬೆನ್ನು ಹಾಕಿ ಮೋಕ್ಷದತ್ತ ಪ್ರಯಾಣಿಸುತ್ತಿರುವವ ಎಂದರ್ಥ.

## ಮನುಃ

ಮನ್ವಂತರಗಳನ್ನು ಮನು ಎಂದೂ ಕರೆಯುತ್ತಾರೆ.

ಮನುಗಳು (ಮನ್ವಂತರಗಳು) ಹದಿನಾಲ್ಕು. ಅವುಗಳೆಂದರೆ:

1 ) ಸ್ವಾಯಂಭುವ ಮನು, 2) ಸ್ವರೋಚಿಶ ಮನು, 3) ಉತ್ತಮ ಮನು , 4) ತಪಾಸ ಮನು (ಗಜೇಂದ್ರ ಮೋಕ್ಷ) 5) ರೈವತ ಮನು, 6) ಚಕ್ಷುಶ ಮನು , 7) ವೈವಸ್ವತ ಮನು (ಈಗ ನಡೆಯುತ್ತಿರುವುದು) ,8) ಸಾವರಣಿ ಮನು , 9) ದಕ್ಷ ಸಾವರಣಿ ಮನು , 10) ಬ್ರಹ್ಮ ಸಾವರಣಿ ಮನು, 11) ಧರ್ಮ ಸಾವರಣಿ ಮನು ,12) ಮೇರು ಸಾವರಣಿ ಮನು, 13) ದೇವ ಸಾವರಣಿ ಮನು ,14) ಇಂದ್ರ ಸಾವರಣಿ ಮನು.

**1 ಮಾನವ ವರ್ಷ= ದೇವತೆಗಳ 1 ದಿನ (ಉತ್ತರಾಯಣ ಹಗಲು ಮತ್ತು ದಕ್ಷಿಣಾಯಣ ರಾತ್ರಿ).**
**360 ಮಾನವ ವರ್ಷ= ದೇವತೆಗಳ 360 ದಿನ= 1 ದೇವ ವರ್ಷ.**

**1200 ದೇವ ವರ್ಷ= 4,32,000 ಮಾನವ ವರ್ಷ= 1 ಕಲಿಯುಗದ ಅವಧಿ.**
**2400 ದೇವ ವರ್ಷ= 8,64,000 ಮಾನವ ವರ್ಷ- 1 ದ್ವಾಪರ ಯುಗದ ಅವಧಿ.**
**3600 ದೇವ ವರ್ಷ= 12,96,000 ಮಾನವ ವರ್ಷ-1 ತ್ರೇತಾ ಯುಗದ ಅವಧಿ.**
**4800 ದೇವ ವರ್ಷ= 17,28,000 ಮಾನವ ವರ್ಷ-1 ಕೃತ ಯುಗದ ಅವಧಿ.**
**12,000 ದೇವ ವರ್ಷ= 43,20,000 ಮಾನವ ವರ್ಷ= 1 ಮಹಾಯುಗ.**
**ಸುಮಾರು 71 ಮಹಾಯುಗ = 1 `ಮನ್ವಂತರ' ಒಂದು ಮನುವಿನ ವರ್ಷ.**

**1000 ಮಹಾಯುಗ = 1 ಕಲ್ಪ = ಒಂದು ಬ್ರಹ್ಮ ದಿನ (ಹಗಲು)**

720 ಕಲ್ಪ = 1 ಬ್ರಹ್ಮ ವರ್ಷ ಒಂದು ಬ್ರಹ್ಮನ ಅವದಿ 100 ಬ್ರಹ್ಮ ವರ್ಷ = 4,320,000 x 1000 x 720 x 100 = 31,104,0000000000 ಮಾನವ ವರ್ಷ !! ಯಾವುದರ ಮೂಲಕ ಮನನ ಮಾಡುತ್ತೇವೋ ಅವನು ಮನು (ಮನನ ಮಾಡುವುದು ಮಂತ್ರಗಳ ಮೂಲಕ )

ಅದ್ದರಿಂದ ಮನು ಅಂದರೆ ಮನುವಿನೊಳಗಿದ್ದು (ಮಂತ್ರಗಳಲ್ಲಿ ಮತ್ತು ಮನ್ವಂತರಗಳಲ್ಲಿ ಇದ್ದು) , ಮನುವಾಗಿ , ಎಲ್ಲವನ್ನೂ ಬಲ್ಲ ಭಗವಂತ!

## 52) ತ್ವಷ್ಟ್ರ

ತ್ವಷ್ಟ್ರ - ಅಂದರೆ ಉಳಿಯಿಂದ ಮರವನ್ನು ಕೆತ್ತುವ ಶಿಲ್ಪಿ ಎನ್ನುವ ಅರ್ಥವನ್ನು ಕೊಡುತ್ತದೆ.
ಈ ಹಿಂದೆ ವಿಶ್ವಕರ್ಮ ನಾಮಕನಾಗಿ ಭಗವಂತನನ್ನು ಶ್ರೇಷ್ಟ ವಿನ್ಯಾಸಕಾರನಾಗಿ ನೋಡಿದ್ದೇವೆ. ಇಲ್ಲಿ ತ್ವಷ್ಟ್ರ ಅಂದರೆ ಮಣ್ಣು , ನೀರು ಮತ್ತು ಬೆಂಕಿಯೆಂಬ ಉಳಿಯಿಂದ , ಅದ್ಭುತ ಸೌಂದರ್ಯದಿಂದ ಕೂಡಿದ ಈ ವಿಶ್ವವನ್ನು ಕೆತ್ತಿದ ಅಪೂರ್ವ ಶಿಲ್ಪಿ ಎಂದರ್ಥ.

## 53) ಸ್ಥವಿಷ್ಠ

ಸ್ಥವಿಷ್ಠ ಅಂದರೆ ಸ್ಥೂಲಕಾಯ ಎನ್ನುವ ಅರ್ಥವನ್ನು ಕೊಡುತ್ತದೆ.

ಭಗವಂತ ವಿವಿದತೆಯಾತ್-ವಿಷ್ವಥಿ ಅಂದರೆ ಆಕಾಶದಂತೆ ಸ್ಥೂಲನಾಗಿರುವವ ಆದರೆ , ಅನಂತ ರೂಪದಲ್ಲಿ ಅನಂತ ವಸ್ತುವಿನಲ್ಲಿ ಅದ್ವಿತೀಯ , ಅನನ್ಯ , ಅನುಪಮ ರೂಪಕನಾಗಿ ತುಂಬಿರುವವನು. ಈ ಪ್ರಪಂಚದಲ್ಲಿ ಒಂದು ವಸ್ತುವಿನಂತೆ ಇನ್ನೊಂದು ವಸ್ತುವಿಲ್ಲ.

ಭಗವಂತನ ಅದ್ವಿತೀಯ ಅಖಂಡ ವಿನ್ಯಾಸಕ್ಕೆ ಉತ್ತಮ ಉದಾಹರಣೆ ಮನುಷ್ಯನ ಬೆರಳಚ್ಚು ಒಬ್ಬನ ಬೆರಳಚ್ಚು ಇನ್ನೊಬ್ಬನಿಗಿಂತ ಬಿನ್ನ ! ಇದು ಸಾಮಾನ್ಯ ವಿನ್ಯಾಸವಲ್ಲ.

ಈ ರೀತಿ ಅಖಂಡವಾಗಿ ಊಹಿಸಲೂ ಅಸಾಧ್ಯವಾದ ಅದ್ಭುತ ಕಾಯನಾದ ಭಗವಂತ ಸ್ಥವಿಷ್ಠ.

## 54) ಸ್ಥವಿರೋ ಧ್ರುವಃ

ಸ್ಥವಿರೋ ಧ್ರುವ ಅಂದರೆ- ಮೇಲೆ ಹೇಳಿರುವ ಇಷ್ಟೊಂದು ವೈವಿಧ್ಯತೆಗಳಿಂದ ಎಲ್ಲಾ ಆಕಾರದಲ್ಲೂ ಇದ್ದು ನಿರ್ವಿಕಾರನಾಗಿರುವ ಭಗವಂತ.

## 55) ಅಗ್ರಾಹ್ಯಃ

ಭಗವಂತ ಅನಂತ ವಿಶ್ವದಲ್ಲಿ ಅನಂತ ರೂಪದಲ್ಲಿ ತುಂಬಿದ್ದರೂ ಕೂಡ ಆತ ನಿರ್ವಿಕಾರ!

ಇದನ್ನು ಹೇಗೆ ಊಹಿಸುವುದು ಅನ್ನುತೀರ ? ಇಲ್ಲ , ಮನುಷ್ಯನ ಮನಸ್ಸಿನಿಂದ ಅವನನ್ನು ಸಂಪೂರ್ಣ ಗ್ರಹಿಸಲು ಅಸಾಧ್ಯ. ಏಕೆಂದರೆ ಆತ ಅಗ್ರಾಹ್ಯ - ಗ್ರಹಿಸಲು ಅಸಾಧ್ಯವಾದವನು.
ಇಷ್ಟೇ ಅಲ್ಲ ಅವನು ಅಗ್ರ-ಅಹ್ಯ ಅಂದರೆ , ಎಲ್ಲಕ್ಕಿಂತ ಮೊದಲು ಇದ್ದವನು , ಎಲ್ಲಕ್ಕಿಂತ ಮೊದಲು ತಿಳಿಯಬೇಕಾದವನು ಮತ್ತು ಎಲ್ಲಕ್ಕಿಂತ ಶ್ರೇಷ್ಠನಾದವನು ಅದ್ದರಿಂದ ಅವನು ಅಗ್ರಾಹ್ಯ !!

## 56 ) ಶಾಶ್ವತಃ

ಭಗವಂತ ಎಂದೂ ಯಾವುದೇ ಬದಲಾವಣೆಗೆ ಒಳಪಡದೆ, ಎಂದೆಂದೂ ಶಾಶ್ವತವಾಗಿರುವವನು. ಅದ್ದರಿಂದ ಅವನು ಶಾಶ್ವತ.

## 57) ಕೃಷ್ಣ

ಕೃಷ್ಣ ಎನ್ನುವುದು ಮೇಲ್ನೋಟಕ್ಕೆ

(1)ವಾಸುದೇವ ದೇವಕಿಯರಲ್ಲಿ ಹುಟ್ಟಿದ(ಅವತರಿಸಿದ) ಭಗವಂತನ ಹೆಸರು.

ಆದರೆ

(2)ಕೃಷ್ಣ ಎನ್ನುವುದು ಭಗವಂತನ ಮೂಲ ರೂಪದ ಹೆಸರೂ ಹೌದು. ಗರ್ಗಾಚಾರ್ಯರು ತಾಯಿ ಯಶೋದೆಯಲ್ಲಿ ಮಗುವಿನ ಹೆಸರಿಡುವಾಗ ಹೀಗೆ ಹೇಳುತ್ತಾರೆ "ಈ ಮಗುವಿಗೆ ನಾನು ಹೆಸರಿಡುತ್ತಿಲ್ಲ. ಈ ಜಗತ್ತಿನಲ್ಲಿ ಇರುವ ಎಲ್ಲಾ ಹೆಸರೂ ಇವನದೇ, ಇವನಿಗೆ ಇರುವ ಹೆಸರನ್ನೇ ನಿಮಗೆ ನೆನಪಿಸುತ್ತಿದ್ದೇನೆ. ಈತ ಶ್ಯಾಮ , ಸುಂದರ, ವಾಸುದೇವ, ಶ್ರೀ ಕೃಷ್ಣ " ಎಂದು ಹೇಳಿ ನಾಮಕರಣ ಮಾಡುತ್ತಾರೆ.

(3)ಚತುರ್ವಂಶ ಮೂರ್ತಿಗಳಲ್ಲಿ ಇಪ್ಪತ್ನಾಲ್ಕನೆ ರೂಪವೂ "ಕೃಷ್ಣ"

(4)ಧರ್ಮ ದೇವತೆಯಲ್ಲಿ ಹುಟ್ಟಿದ ಒಂದು ರೂಪ "ಕೃಷ್ಣ" (ನರ, ನಾರಾಯಣ , ಹರಿ, ಕೃಷ್ಣ)

(5) ಸಹಸ್ರನಾಮದಲ್ಲಿ ಕೂಡ ಭಗವಂತನಿಗೆ ಕೃಷ್ಣ ಎಂದು ಸಂಬೋದಿಸಿದ್ದಾರೆ.

ಮೇಲಿನ ಐದು ಸಂದರ್ಬಗಳಲ್ಲಿ "ಕೃಷ್ಣ" ನಾಮಕನಾದ ಭಗವಂತನನ್ನು ಕಾಣುತ್ತೇವೆ. ಮೂಲತಃ ಕೃಷ್ಣ ಅಂದರೆ ಕಪ್ಪು - ನೀಲ ಮೇಘ ಶ್ಯಾಮ. ಈ ನೀಲ ಕಪ್ಪು ಅಂದದ ಪ್ರತೀಕ ಹಾಗೂ ಜ್ಞಾನದ ಪ್ರತೀಕ ಕೂಡ ಹೌದು. ದ್ರೌಪದಿ ಆ ಕಾಲದ ಅತ್ಯಂತ ಅಪೂರ್ವ ಸುಂದರಿ. ಅದ್ದರಿಂದ ಆಕೆಯನ್ನು ಕೃಷ್ಣೆ ಎಂದು ಕರೆಯುತ್ತಿದ್ದರು. ದ್ರೋಣಾಚಾರ್ಯರು ಬಿಳಿ ಗಡ್ಡದ ಶ್ವೇತ ವಸ್ತ್ರಧಾರಿಯಾಗಿದ್ದ ಕಪ್ಪಗಿನ ಆಕರ್ಷಕ ವ್ಯಕ್ತಿ. ಇಲ್ಲಿ ಕಪ್ಪು ಜ್ಞಾನದ ಸಂಕೇತ. ಅತೀ ಕೋಪಬಂದಾಗ ನಾವು ಕೆಂಪಾಗಿ ಕಾಣುತ್ತೇವೆ. ಅದೇ ರೀತಿ ಸಂಪೂರ್ಣ ಜ್ಞಾನಿ ನೀಲವಾಗಿ ಕಾಣುತ್ತಾನೆ. ಅದ್ದರಿಂದ ಪರಿಪೂರ್ಣ ಜ್ಞಾನಿ ಭಗವಂತ ತನ್ನ ಅವತಾರದಲ್ಲಿ ಕಾಣಿಸಿದ್ದು

ನೀಲ ಮೇಘ ಶ್ಯಾಮನಾಗಿ. ಇದೇ ರೀತಿಯಲ್ಲಿ ಇನ್ನೂ ಹಲವೂ ರೂಪದಲ್ಲಿ ಕೃಷ್ಣ ಎನ್ನುವ ನಾಮದ ಅರ್ಥವನ್ನು ಹುಡುಕಬಹುದು.

ಕೃಷ್ಣ ಹುಟ್ಟುವ ಮೊದಲು ದೇವಕಿಯ ಗರ್ಭದಲ್ಲಿ ಸಂಕರ್ಷಣ (ಬಲರಾಮ) ಇದ್ದ. ಸಂಕರ್ಷಣನನ್ನು ಸಂಕರ್ಷಿಸಿ ಆನಂತರ ದೇವಕಿಯ ಅಷ್ಟಮ ಗರ್ಭದಲ್ಲಿ ಹುಟ್ಟಿದ ಕಾರಣಕ್ಕೆ ಆತನನ್ನು ಕೃಷ್ಣ ಎನ್ನುತ್ತಾರೆ. ಆತ ಹುಟ್ಟಿದ ಮೇಲೆ ಮಾಡಿದ ಪ್ರತಿಯೊಂದು ಕೆಲಸವೂ ಕರ್ಷಣವೇ. ಪೂತನಿ, ಶಕಟಾಸುರ, ಕೇಶಿ, ಕಂಸ .. ಹೀಗೆ ದುಷ್ಟ ಶಕ್ತಿಗಳನ್ನೆಲ್ಲವನ್ನು ಕರ್ಷಣೆ ಮಾಡಿದವ ಕೃಷ್ಣ. ಹಾಗೆ ಜ್ಞಾನ ಮೂರ್ತಿಯಾದ ಆತ ಹಕ್ಕಿಗಳು , ಹಸುಗಳು, ಗೋಪಾಲಕರು, ಗೋಪಿಕೆಯರು ಹಾಗು ಯಮುನಾ ನದಿಯನ್ನೂ ಕೂಡ ತನ್ನ ಸೌಂದರ್ಯದಿಂದ ಆಕರ್ಶಿಸಿ ಉತ್ಕರ್ಷಣೆ ಮಾಡಿದವ. ಅದ್ದರಿಂದ ಆತ 'ಕೃಷ್ಣ' . ಅರ್ಜುನನ ರಥದಲ್ಲಿ ನಿಂತು ಹದಿನೆಂಟು ಅಕ್ಷೋಹಿಣಿ ಸೈನ್ಯವನ್ನು ಕರ್ಷಣೆ ಮಾಡಿದ. ಹೀಗೆ ಅಸುರರನ್ನು ನಿಗ್ರಹಿಸಿ ಭೂ ಬಾರವನ್ನು ಕರ್ಷಣೆ ಮಾಡಿ, ಸಜ್ಜನರ ಹಾಗೂ ಧರ್ಮದ ಉದ್ಧಾರಕ್ಕಾಗಿ ಅವತರಿಸಿದ ಭಗವಂತ 'ಕೃಷ್ಣ' . ಇನ್ನು ಕೃಷ್ಣ ಪದವನ್ನು ಒಡೆದರೆ ಕೃಷಿ+ಣ=ಕೃಷ್ಣ ಕೃಷಿ ಅಂದರೆ ಭೂಮಿ, ಣ ಅಂದರೆ ಭಲ ಅಥವ ಆನಂದ. ಅದ್ದರಿಂದ ಕೃಷ್ಣ ಅಂದರೆ ಧರ್ಮವನ್ನು ಬಲಪಡಿಸಲು ಭೂಮಿಯಲ್ಲಿ ಅವತರಿಸಿದ ಆನಂದಸ್ವರೂಪ ಭಗವಂತ.

## 58) ಲೋಹಿತಾಕ್ಷಃ

ಲೋಕ+ಹಿತ+ಅಕ್ಷ - ಅಂದರೆ ಲೋಕದ ಹಿತಕ್ಕಾಗಿ ಭಕ್ತರ ಮನೋಭಿಲಾಷೆ ಪೂರ್ತಿಗಾಗಿ ತಾವರೆಯಂತಹ ಅರಳುಗಣ್ಣು ಉಳ್ಳವನು ಎಂದರ್ಥ. ಈ ನಾಮದ ಅರ್ಥವನ್ನು ತಿಳಿಯಬೇಕಾದರೆ ನಾವು ಭಗವಂತ ಕೊಪೋದ್ರಿಕ್ತನಾದ ಕೆಲವು ಘಟನೆಗಳನ್ನು ನೋಡಬೇಕಾಗುತ್ತದೆ. ಮಹಾಭಾರತ ಯುದ್ದದಲ್ಲಿ ಅರ್ಜುನ ಭೀಷ್ಮ ಪಿತಾಮಹರ ನಡುವೆ ಯುದ್ದ ಪ್ರಾರಂಭವಾದಾಗ ನಡೆದ ಒಂದು ಘಟನೆಯನ್ನು ನೋಡೋಣ. ಅರ್ಜುನ ತನ್ನನ್ನು ಮುದ್ದಿಸಿ ಆಡಿಸಿ ಬೆಳೆಸಿದ ಪಿತಾಮಹನೊಂದಿಗೆ ಮನಸ್ಸಿಲ್ಲದ ಮನಸ್ಸಿನಿಂದ ಯುದ್ಧ ಮಾಡುತ್ತಿರುತ್ತಾನೆ. ಇದನ್ನು ಗಮನಿಸಿದ ಸಾರಥಿ ಕೃಷ್ಣ ಕೋಪಗೊಳ್ಳುತ್ತಾನೆ. ಮಹಾಭಾರತ ಯುದ್ದದ ಮೊದಲು ತಾನು ಶಸ್ತ್ರ ಹಿಡಿಯುವುದಿಲ್ಲ ಎಂದು ಪ್ರತಿಜ್ಞೆ ಮಾಡಿದ್ದ ಕೃಷ್ಣ,

ಕೋಪಾವೇಶದಿಂದ ಭೀಷ್ಮನನ್ನು ಸಾಯಿಸಲೆಂಬಂತೆ ಚಕ್ರವನ್ನೇ ಹಿಡಿದು ಮುಂದೊತ್ತಿ ಬರುತ್ತಿದ್ದಾನೆ! ಆಗ ಆತನ ಕಣ್ಣು ಕೆಂದಾವರೆ ಹೂವಿನಂತೆ ಕೆಂಪಾಗಿ ಕಾಣುತ್ತಿರುತ್ತದೆ. ಇದನ್ನು ನೋಡಿದ ಬೀಷ್ಮ ಎರಡೂ ಕೈಯನ್ನು ಜೋಡಿಸಿ ಹೀಗೆ ಹೇಳುತ್ತಾನೆ -

" ಓ ಭಗವಂತ; ನಿನ್ನ ಕೈಯಲ್ಲಿ ಚಕ್ರ ಹಿಡಿಸುತ್ತೇನೆ, ಹಾಗೆ ಯುದ್ಧ ಮಾಡುತ್ತೇನೆ ಎಂದು ನಾನು ಪ್ರತಿಜ್ಞೆ ಮಾಡಿದ್ದೆ. ಚಕ್ರ ಹಿಡಿಯುವುದಿಲ್ಲ ಎಂದಿದ್ದೆ ನೀನು. ಆದರೆ ಈಗ ನನ್ನ ಪ್ರತಿಜ್ಞೆಯನ್ನು ಈಡೇರಿಸಲು ನೀನು ಚಕ್ರ ಹಿಡಿದಿರುವೆ. ನಿನ್ನನ್ನೇ ಮರೆತಿರುವೆ, ಆದರೆ ನಿನ್ನ ಭಕ್ತನನ್ನು ಮರೆತಿಲ್ಲ ; ನೀನಲ್ಲದೆ ನಮಗೆ ಗತಿ ಇನ್ನ್ಯಾರು ? " ಎನ್ನುತ್ತಾನೆ . ಈ ಘಟನೆಯಲ್ಲಿ ಲೋಕಕಲ್ಯಾಣಕ್ಕಾಗಿ ಭಗವಂತನ ಕೋಪ ಮತ್ತು ಅದರ ಹಿಂದಿರುವ ಕರುಣೆ ವ್ಯಕ್ತವಾಗಿದೆ.

ಇದೇ ರೀತಿ ಇನ್ನೊಂದು ಘಟನೆ ನರಸಿಂಹ ಅವತಾರದಲ್ಲಿ ಕಂಡು ಬರುತ್ತದೆ. ಹಿರಣ್ಯಕಷಿಪುವನ್ನು ಕೊಂದು ಆತನ ಕರುಳನ್ನು ಬಗೆದು ಕೊರಳಿಗೆ ಹಾಕಿಕೊಂಡರೂ, ಶಾಂತನಾಗದ ಭಗವಂತನ ಕೋಪೋದ್ರಿಕ್ತ ರೂಪವನ್ನು ಕಂಡು, ದೇವತೆಗಳೆಲ್ಲರೂ ಭಯಗೊಂಡಾಗ, ಐದು ವರ್ಷದ ಪುಟ್ಟ ಬಾಲಕ ಪ್ರಹಲ್ಲಾದನ ಪ್ರಾರ್ಥನೆಗೆ ಮಣಿದು, ಶಾಂತ ಮೂರ್ತಿಯಾಗುತ್ತಾನೆ. ಮೇಲಿನ ಘಟನೆಯಲ್ಲಿ ಲೋಕಕಲ್ಯಾಣಕ್ಕಾಗಿ ಭಗವಂತ ದುಷ್ಟರನ್ನು ತನ್ನ ಕೆಂಗಣ್ಣಿನಿಂದ ನಾಶಮಾಡಿ, ಭಕ್ತರ ಅಭಿಲಾಷೆಯನ್ನು ಪೂರ್ತಿ ಮಾಡುವುದು ಕಂಡುಬರುತ್ತದೆ. ಇಂತಹ ಅರಳುಗಣ್ಣಿನ ಭಗವಂತ ಲೋಹಿತಾಕ್ಷ !

## 59) ಪ್ರತರ್ದನಃ

ಭಾಷೆಯಲ್ಲಿ, ಬರವಣಿಗೆಯಲ್ಲಿ, 'ಸಂಕ್ಷಿಪ್ತ '  ಉಪಯೋಗಿಸುವುದು ಮೂಲತಃ ಬಂದಿದ್ದು ಸಂಸ್ಕೃತದಿಂದ. ಸಂಸ್ಕೃತ ಗ್ರಂಥಗಳಲ್ಲಿ ವಿಶೇಷವಾಗಿ, ಪದದ ಸಂಕ್ಷಿಪ್ತ ರೂಪವನ್ನು ಉಪಯೋಗಿಸುತ್ತಾರೆ . ಪ್ರತರ್ದನ ಎನ್ನುವ ಪದವನ್ನು ಈ ಕೆಳಗಿನಂತೆ ಬಿಡಿಸಬಹುದು.

1) ಪ್ರ+ತರ್ದನ 2) ಪ್ರ+ತರ್ದ+ನಯತಿ

ಪ್ರ+ತರ್ದನ

ಇಲ್ಲಿ 'ಪ್ರ' ಎನ್ನುವುದು ಪ್ರಕೃಷ್ಟರು ಎನ್ನುವ ಪೂರ್ಣ ಪದದ ಸಂಕ್ಷಿಪ್ತ ರೂಪ.
ಪ್ರತರ್ದನಃ ಅಂದರೆ ಪ್ರಕೃಷ್ಟರಿಗೆ ಹಿಂಸೆ ಕೊಡುವ ದುಷ್ಟ ಶಕ್ತಿಯನ್ನು ನಿರ್ಮೂಲ ಮಾಡುವವನು ಎಂದರ್ಥ.

ಪ್ರ+ತರ್ದ+ನಯತಿ

ಇಲ್ಲಿ 'ಪ್ರ' ಎನ್ನುವುದು ಪ್ರಹ್ಲಾದ ಎನ್ನುವ ಪೂರ್ಣ ಪದದ ಸಂಕ್ಷಿಪ್ತ ರೂಪ.
ತರ್ದ ಎಂದರೆ ಹಿಂಸೆ, ನಯತಿ ಎಂದರೆ ಹೋಗಲಾಡಿಸಿದವನು. ಅದ್ದರಿಂದ ಪ್ರತರ್ದನಃ ಎಂದರೆ ಪ್ರಹ್ಲಾದನಿಗೆ ಹಿಂಸೆ ಕೊಟ್ಟಂತಹ ಹಿರಣ್ಯಕಶಿಪುವನ್ನು ಮರ್ದಿಸಿ, ಆತನ ಕಷ್ಟವನ್ನು ಪರಿಹರಿಸಿ, ಲೋಕವನ್ನು ಹಿಂಸೆಯಿಂದ ಪಾರುಮಾಡಿದವನು ಎಂದಾಗುತ್ತದೆ.

## 60) ಪ್ರಭೂತ

ಭೂಮ ಎಂದರೆ ಪರಿಪೂರ್ಣತೆ. ಪ್ರಭೂತಿ ಎಂದರೆ ಭೂತಿಗಲ್ಲಿ ಪ್ರಕೃಷ್ಟವಾದ ಸ್ಥಿತಿ.
ಪ್ರಭೂತ ಎಂದರೆ ಪರಿಪೂರ್ಣವಾದ ಆನಂದಸ್ವರೂಪನಾದ ಭಗವಂತ.

## 61) ತ್ರಿಕಕುಬ್ಧಾಮ (ಪ್ರಭೂತಸ್ತ್ರಿಕಕುಬ್ಧಾಮ)

ತ್ರಿ+ ಕಕುತ್+ ಧಾಮ
ತ್ರಿ ಅಂದರೆ ಮೂರು,